ಕನ್ನಡ ದಿನಪತ್ರಿಕೆ
13 ಜುಲೈ । ಶನಿವಾರ
13 JULY 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು : ಸತೀಶ ಬ ಗುಡಗೆನಟ್ಟಿ
BELAGAVI VARADDI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 8 | ಸಂಪುಟ – 5 ಸಂಚಿಕೆ – 126 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಅಧಿವೇಶನಕ್ಕೆ ಬೇಗ ಬಂದವರಿಗೆ ಬಹುಮಾನ: ಸ್ಪೀಕರ್ ಯು.ಟಿ. ಖಾದರ್ ಘೋಷಣೆ



ಬೆಂಗಳೂರು: 6ನೇ ವಿಧಾನಸಭೆಯ 4ನೇ ಮುಂಗಾರು ಅಧಿವೇಶನ ಜುಲೈ 15 ರಿಂದ 26ರವರೆಗೆ ನಡೆಯಲಿದೆ ಎಂದು ಸ್ಪೀಕರ್ ಯು.ಟಿ. ಖಾದರ್ ತಿಳಿಸಿದರು.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, "ಜುಲೈ 15 ರಿಂದ ಒಟ್ಟು 9 ದಿನಗಳ ಕಾಲ ಅಧಿವೇಶನ ನಡೆಯಲಿದೆ. ಅಧಿವೇಶನದಲ್ಲಿ ಸರ್ಕಾರದಿಂದ ಸ್ವೀಕರಿಸಲಾಗುವ ವಿಧೇಯಕಗಳನ್ನ ಪರ್ಯಾಲೋಚನೆಗೆ ಹಾಗೂ ಅಂಗೀಕಾರಕ್ಕೆ ತೆಗೆದುಕೊಳ್ಳಲಾಗುವುದು" ಎಂದು ಹೇಳಿದರು.

ಸಭೆಗೆ ಬೇಗ ಹಾಜರಾಗುವ ಶಾಸಕರಿಗೆ ಟೀ ಕಪ್ ನೀಡಲಾಗುವುದು. ಕಳೆದ ಭಾರೀ ನೀಡಿದ ಅವಕಾಶ ಈ ಭಾರಿಯೂ ನೀಡುತ್ತೇವೆ. ಇಡೀ ದಿನ ಇರುವ ಸದಸ್ಯರುಗಳಿಗೆ ವಿಶೇಷ ಅವಕಾಶ ನೀಡಲಾಗುತ್ತದೆ ಎಂದರು.

## ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆ

## ಚಿಕ್ಕೋಡಿ ತಾಯಿ ಮಕ್ಕಳ ಆಸ್ಪತ್ರೆ ಶೀಘ್ರ ಲೋಕಾರ್ಪಣೆಗೆ ಕ್ರಮ ಜರುಗಿಸಿ: ಸಚಿವ ಸತೀಶ್ ಜಾರಕಿಹೊಳಿ




ಬೆಳಗಾವಿ: ಚಿಕ್ಕೋಡಿಯಲ್ಲಿ ನಿರ್ಮಾಣವಾದಂತಹ ತಾಯಿ ಮಕ್ಕಳ ಆಸ್ಪತ್ರೆಯನ್ನು ಬರುವ ಅಗಸ್ಟ 15 ರಂದು ಲೊಕಾರ್ಪಣೆಗೊಳಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಆರೋಗ್ಯ ಇಲಾಖೆಯ ಅಧಿಕಾ–ರಿಗಳಿಗೆ ಸೂಚನೆ ನೀಡಿದರು.

ಬೆಳಗಾವಿಯ ಸುವರ್ಣ ಸೌಧದಲ್ಲಿ ಶುಕ್ರವಾರ ಜರುಗಿದ 2024–25ನೇ ಸಾಲಿನ ಪ್ರಥಮ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (ಕೆ.ಡಿ.ಪಿ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೇ ಚಿಕ್ಕೋಡಿಯಲ್ಲಿ ನಿರ್ಮಾಣವಾದಂತಹ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಕಟ್ಟಡ ಕಾಮಗಾರಿ ಪೂರ್ಣಗೊಂಡು ವೈದ್ಯಕೀಯ ಸಿಬ್ಬಂದಿ ನೇಮಕ ಆಗಿರುವುದರಿಂದ ಆಸ್ಪತ್ರೆಯನ್ನು ಬರುವ ಆಗಸ್ಟ್ 15 ರಂದು ಉದ್ಘಾಟನೆ ಮಾಡಲು ಸಿದ್ಧತೆ ಮಾಡಿಕೊಳ್ಳುವಂತೆ ತಿಳಿಸಿದರು.

ಸಾರ್ವಜನಿಕರಿಗೆ ಉತ್ತಮ ವೈದ್ಯಕೀಯ ಸೌಲಭ್ಯ ಒದಗಿಸಲು ಅನುಕೂಲವಾಗುವಂತೆ ಬೆಳಗಾವಿಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಒದಗಿಸಲಾಗಿರುವ ಅತ್ಯಾಧುನಿಕ ಯಂತ್ರೋಪಕರಣಗಳನ್ನು ಕೂಡಲೇ ಸಾರ್ವಜನಿಕ ಬಳಕೆಗೆ ಒದಗಿಸಬೇಕು.

ರಾಜ್ಯಾದ್ಯಂತ ಡೆಂಗ್ಯೂ ಜ್ವರದ ಹಾವಳಿ ಹೆಚ್ಚಾಗಿದ್ದು ಜಿಲ್ಲೆಯಲ್ಲಿ ಡೆಂಗ್ಯೂ ಜ್ವರದ ನಿಯಂತ್ರಣ–ಕ್ಕೆ ಅಗತ್ಯ ಕ್ರಮವಹಿಸಬೇಕು. ಜಿಲ್ಲೆಯ ಎಲ್ಲ ಆಸ್ಪತ್ರೆಗಳಿಗೆ ಡೆಂಗ್ಯೂ ಪರೀಕ್ಷಾ ಕಿಟ್ ಗಳನ್ನು ವಿತರಿಸಬೇಕು. ಅಲ್ಲದೇ ಡೆಂಗ್ಯೂ ಜ್ವರದಿಂದ ಬಳಲುವ ರೋಗಿಗಳಿಗೆ ತ್ವರಿತವಾಗಿ ಚಿಕಿತ್ಸೆ ಒದಗಿಸುವದರ ಜೊತೆಗೆ ಡೆಂಗ್ಯೂ ಜ್ವರಕ್ಕೆ ಬೇಕಾಗುವಂತಹ ಅಗತ್ಯದ ಔಷಧಿಗಳ ವ್ಯವಸ್ಥೆ ಮಾಡಿಟ್ಟುಕೊಳ್ಳಬೇಕು.

ಡೆಂಗ್ಯೂ ಜ್ವರದ ಲಕ್ಷಣಗಳು, ಸಾರ್ವಜನಿಕರು ಕೈಗೊಳ್ಳಬೇಕಾದ ಮುಂಜಾಗೃತಾ ಕ್ರಮಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸಲು ಮುಂದಾಗುವಂತೆ ಆರೋಗ್ಯ ಇಲಾಖಾ ಅಧಿಕಾ–ರಿಗಳಿಗೆ ಸೂಚಿಸಿದರು. ತಕ್ಷಣ ಡೆಸ್ಕ್ ಖರೀದಿಗೆ ಸಚಿವರ ಸೂಚನೆ: ಡೆಸ್ಕ್ ಗಳ ಖರೀದಿಗೆ ಲಭ್ಯವಿರುವ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ಜಿಲ್ಲೆಯಾದ್ಯಂತ ಅಗತ್ಯವಿರುವ



ಶಾಲೆಗಳಿಗೆ ಡೆಸ್ಕ್ ಗಳನ್ನು ಒದಗಿಸಬೇಕು ಎಂದು ಶಿಕ್ಷಣ ಇಲಾಖೆಯ ಅಧಿಕಾ–ರಿಗಳಿಗೆ ಸೂಚಿಸಿದ ಜಿಲ್ಲಾ ಉಸ್ತುವಾರಿ ಸಚಿವ ಜಾರಕಿಹೊಳಿ ಅವರು, ಶೈಕ್ಷಣಿಕ ಪ್ರಗತಿಗಾಗಿ ಶೀಘ್ರವೇ ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಿಗೆ ಪ್ರತ್ಯೇಕವಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರನ್ನು ನೇಮಿಸಲಾಗುವುದು ಎಂದರು. ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆ ಉತ್ತಮವಾಗಿ ಆಗುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯ ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆ ಆಗದಂತೆ ನಿಗಾವಹಿಸಬೇಕು. ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಂತಹ ರೈತ ಕುಟುಂಬಗಳಿಗೆ ಶೀಘ್ರವೇ ಪರಿಹಾರ ಒದಗಿಸಬೇಕು.

ಜಿಲ್ಲೆಯಲ್ಲಿ ಕೈಗೊಳ್ಳಲಾದ ಜಲ ಜೀವನ ಮಿಷನ ಯೋಜನೆಯಡಿ ಅಪೂರ್ಣ ಕಾಮಗಾರಿ ಹಾಗೂ ಸಮರ್ಪಕ ನೀರು ಪೂರೈಕೆ ಆಗುತ್ತಿರುವ ಕುರಿತು ಪರಿಶೀಲಿಸಲು ತಿಳಿಸಿದರು. ಜಿಲ್ಲೆಯಲ್ಲಿ ಹೊಸದಾಗಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಹೊಸ ವಿದ್ಯುತ್ ವಿತರಣಾ ಕೇಂದ್ರಗಳ ಮಾಹಿತಿ ಪಡೆದ ಅವರು, ಹೊಸ ವಿದ್ಯುತ್ ವಿತರಣಾ ಕೇಂದ್ರಗಳ ಸ್ಥಾಪನೆಗೆ ಬೇಕಾದಂತಹ ಜಾಗೆಯನ್ನು ಪಡೆದುಕೊಳ್ಳಲು ಅಗತ್ಯ ಕ್ರಮಗಳನ್ನು ಶೀಘ್ರವೆ ಪೂರ್ಣಗೊಳಿಸಬೇಕು. ರೈತ–ರಿಗೆ ಅನಾನೂಕುಲ ಆಗದಂತೆ ದುರಸ್ತಿಗೊಳಪಟ್ಟ ವಿದ್ಯುತ್ ಪರಿವರ್ತಕಗಳನ್ನು ಶೀಘ್ರವೆ ಬದಲಾಯಿಸಲು ಕ್ರಮವಹಿಸಬೇಕು.

ರಾಯಬಾಗ ತಾಲೂಕಿನಲ್ಲಿರುವ ಕೆರೆಗಳನ್ನು ತುಂಬಿಸುವ ಕಾರ್ಯವನ್ನು ಶೀಘ್ರವೇ ಪೂರ್ಣಗೊಳಿಸಬೇಕು.

3ನೇ ಪುಟಕ್ಕೆ }

## ತಿರುಪತಿಗೆ ಹೊರಟಿದ್ದ ಬಸ್ ಭೀಕರ ಅಪಘಾತ: 9 ಜನರು ದುರ್ಮರಣ




ಕೋಲಾರ: ತಿರುಪತಿಗೆ ತೆರಳುತ್ತಿದ್ದ ಬಸ್ ಹಾಗೂ ಲಾರಿ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ 9 ಜನರು ಸಾವನ್ನಪ್ಪಿರುವ ಘಟನೆ ಕೋಲಾರದ ಬಳಿ ನಡೆದಿದೆ.

ಬೆಂಗಳೂರಿನಿಂದ ತಿರುಪತಿಗೆ ಪ್ರಯಾಣಿಕರನ್ನು ಹೊತ್ತು ಬಸ್ ಸಾಗಿತ್ತು. ಈ ವೇಳೆ ಲಾರಿಗೆ ಡಿಕ್ಕಿ ಹೊಡೆದಿದ್ದು, ಈ ದುರಂತ ಸಂಭವಿಸಿದೆ.

ಅಪಘಾತದಲ್ಲಿ 9 ಜನರು ಸಾವನ್ನಪ್ಪಿದ್ದಾರೆ. 15 ಜನರು ಗಂಭೀರವಾಗಿ ಗಾಯಗೊಂಡಿದ್ದಾರೆ. ಸ್ಥಳಕ್ಕೆ ಪೊಲೀಸರು ದೌಡಾಯಿಸಿದ್ದು, ರಕ್ಷಣಾ ಕಾರ್ಯಾಚರಣೆ ನಡೆದಿದೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

## ಪೊಲೀಸರಿಂದ ಬಂಧನ ತಪ್ಪಿಸಲು ಗೂಡ್ಸ್ ಆಟೋದಲ್ಲಿ ಮೈಸೂರಿಗೆ ಬಂದ ಆರ್. ಅಶೋಕ್

ಮೈಸೂರು: ಮೈಸೂರಿನಲ್ಲಿ ನಡೆದ ಪ್ರತಿಭಟನೆಗೆ ವಿಪಕ್ಷ ನಾಯಕ ಆರ್. ಅಶೋಕ್ ಹಾಗೂ ಶಾಸಕ ಅಶ್ವಥ್ ನಾರಾಯಣ್ ಗೂಡ್ಸ್ ಆಟೋದಲ್ಲಿ ಬಚ್ಚಿಟ್ಟುಕೊಂಡು ಆಗಮಿಸಿದರು.

ಹೌದು... ಮೈಸೂರಿನಲ್ಲಿ ನಡೆದ ಪ್ರತಿಭಟನೆಗೆ ವಿಪಕ್ಷ ನಾಯಕ ಆರ್. ಅಶೋಕ್ ಹಾಗೂ ಶಾಸಕ ಅಶ್ವಥ್ ನಾರಾಯಣ್ ಗೂಡ್ಸ್ ಆಟೋದಲ್ಲಿ ಬಚ್ಚಿಟ್ಟುಕೊಂಡು ಆಗಮಿಸಿದರು. ಈ ನಡುವೆ, ಕಾರ್ಯಕರ್ತರ ಗುಂಪಿನೊಡನೆ ಮೈಸೂರಿಗೆ ಹೊರಟಿದ್ದ ಪಕ್ಷ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರನ್ನು ಬಿಡದಿ ಬಳಿಯೇ ಪೊಲೀಸರು ಬಂಧಿಸಿ ತಡೆದಿದ್ದಾರೆ.

ಸಿಎಂ ಸಿದ್ದರಾಮಯ್ಯ ಈ ದೇಶ ಕಂಡ ಬ್ರಹ್ಮಾಂಡ ಭ್ರಷ್ಟಾಚಾರಿ ಎಂದು ಅಶೋಕ್ ಆರೋಪಿಸಿದರು. ಮೈಸೂರಿನಲ್ಲಿ ಸೈಟು ಬೇಕು ಅಂತ 80 ಸಾವಿರ ಜನ ಅರ್ಜಿ ಹಾಕಿದ್ದಾರೆ. ಸಿಎಂ ಸಿದ್ದರಾಮಯ್ಯ ಕುಟುಂಬ ಹಾಗೂ ಬೆಂಬಲಿಗರಿಗೆ ಮಾತ್ರ ಸೈಟ್ ಕೊಟ್ಟಿದ್ದಾರೆ. ಜನರಿಗೆ ಸೈಟು



ಕೊಡಲು ಆಗಲ್ಲ. ಇವರಿಗೆಲ್ಲ ಹೇಗೆ ಸೈಟು ಕೊಡ್ತಾರೆ? ಮುಡಾದಲ್ಲಿ ಬೃಹತ್ ಹಗರಣವೇ ನಡೆದಿದೆ. ಸಿದ್ದರಾಮಯ್ಯ ರಾಜೀನಾಮೆ ನೀಡಡಬೇಕು ಎಂದು ಅಶೋಕ್ ಆಗ್ರಹಿಸಿದರು.

ನಮಗೆ ಅಂಜಿ ನಮ್ಮ ಪ್ರತಿಭಟನೆ ಹತ್ತಿಕ್ಕಲು ಯತ್ನ ಮಾಡಿದ್ದಾರೆ. ನಾನು ಪೊಲೀಸರ ಕಣ್ಣು ತಪ್ಪಿಸಿ ತರಕಾರಿ ಟೆಂಪೋದಲ್ಲಿ ಬಂದೆ.

ನಮ್ಮ ಉದ್ದೇಶ ಸಾರ್ವಜನಿಕ–ರಿಗೆ ಆಗುತ್ತಿರುವ ಅನ್ಯಾಯ ಬಯಲಿಗೆ ಬರಬೇಕು ಅನ್ನುವುದು. ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ನೇರ ಪಾತ್ರ ಇದೆ. 50:50 ಬೋಗಸ್ ಮಾಡಿ ಅಕ್ರಮ ಮಾಡಿದ್ದಾರೆ.

ಬದಲಿ ನಿವೇಶನ ಪಡೆದು ವಂಚನೆ ಮಾಡಿದ್ದಾರೆ. ಪ್ರಭಾವ ಬಳಸಿ ಸೈಟು ಪಡೆದಿದ್ದಾರೆ. ನಮ್ಮ ಹೋರಾಟ ಹತ್ತಿಕ್ಕುವ ಯತ್ನ ಮಾಡಿದ್ದಾರೆ.

ನಮ್ಮ ಅಧ್ಯಕ್ಷರನ್ನು ಬೆಂಗಳೂ–ರಿನಲ್ಲಿ ಬಂಧಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ್ ಕಿಡಿ ಕಾರಿದರು.

## 3ನೇ ತರಗತಿ ಬಾಲಕಿ ಮೇಲೆ ಸಾಮೂಹಿಕ ಲೈಂಗಿಕ ಕಿರುಕುಳ; ಅಪ್ರಾಪ್ತ ಹುಡುಗರು ಪರಾರಿ



ಬೆಂಗಳೂರು: ಹನ್ನೆರಡು, ಹದಿಮೂರು ವರ್ಷದ ಬಾಲಕರು 8 ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿ ಕೊಲೆ ಮಾಡಿ, ಕಾಲುವೆಗೆ ಎಸೆದಿರುವ ಹೃದಯವಿದ್ರಾವಕ ಘಟನೆ ಆಂಧ್ರಪ್ರದೇಶದ ನಂದ್ಯಾಲ್ ಜಿಲ್ಲೆಯಲ್ಲಿ ನಡೆದಿದೆ. ಮೂವರು ಅಪ್ರಾಪ್ತ ಹುಡುಗರು ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿ ಕೊನೆಗೆ ಕೊಲೆ ಮಾಡಿದ್ದಾರೆ. ಬಳಿಕ ಸಾಕ್ಷ್ಯವನ್ನು ನಾಶಪಡಿಸಲು ಆಕೆಯ ದೇಹವನ್ನು ಕಾಲುವೆಗೆ ಎಸೆದಿದ್ದಾರೆ.

ಬಾಲಕಿ 3ನೇ ತರಗತಿಯಲ್ಲಿ ಓದುತ್ತಿದ್ದರೆ ಇಬ್ಬರು 6ನೇ ತರಗತಿ, ಇನ್ನೊಬ್ಬ ಬಾಲಕ 7ನೇ ತರಗತಿಯಲ್ಲಿ ಓದುತ್ತಿದ್ದ. ಸಂತ್ರಸ್ತೆ ಮತ್ತು ಆರೋಪಿ ಇಬ್ಬರೂ ಒಂದೇ ಶಾಲೆಯ ವಿದ್ಯಾರ್ಥಿಗಳು ಎಂದು ಹೇಳಲಾಗಿದೆ. ಪಾರ್ಕ್ನಲ್ಲಿ ಆಟವಾಡುತ್ತಿದ್ದ ಮಗಳು ನಾಪತ್ತೆಯಾಗಿದ್ದಾಳೆ ಎಂದು ಅಪ್ರಾಪ್ತ ಬಾಲಕಿಯ ತಂದೆ ಭಾನುವಾರ ದೂರು ದಾಖಲಿಸಿದ್ದರು. ಹುಡುಗರು ಬಾಳಕಿ ಕರೆದುಕೊಂಡು ಸಾಮೂಹಿಕ ಅತ್ಯಾಚಾರ ಮಾಡಿದ್ದಾರೆ.

## ಜೀವನದಲ್ಲಿ ಸೋಲು-ಗೆಲುವು ಸಹಜ; ಸ್ಮೃತಿ ಇರಾನಿ ಅಪಹಾಸ್ಯ ಬೇಡ: ಬೆಂಬಲಿಗರಿಗೆ ರಾಹುಲ್ ಕಿವಿಮಾತು



ನವದೆಹಲಿ: ಲೋಕಸಭೆ ಚುನಾವಣೆಯಲ್ಲಿ ಉತ್ತರ ಪ್ರದೇಶದ ಅಮೇಠಿಯಿಂದ ಸ್ಪರ್ಧಿಸಿ ಸೋಲು ಕಂಡಿರುವ ಬಿಜೆಪಿ ನಾಯಕಿ ಸ್ಮೃತಿ ಇರಾನಿ ಅವರ ವಿರುದ್ಧ ಅವಹೇಳನಕಾರಿ ಭಾಷೆ ಮತ್ತು ಹೇಳಿಕೆಗಳನ್ನು ನೀಡದಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕಾರ್ಯಕರ್ತ–ರಿಗೆ ಕಿವಿಮಾತು ಹೇಳಿದ್ದಾರೆ. ಈ ಕುರಿತು 'ಎಕ್ಸ್'ನಲ್ಲಿ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು 'ಜೀವನದಲ್ಲಿ ಸೋಲು–ಗೆಲವು ಸಾಮಾನ್ಯ. ಆದೇ ರೀತಿ ಸ್ಮೃತಿ ಇರಾನಿ ಅಥವಾ ಇತರ ಯಾವುದೇ ನಾಯಕರ ಬಗ್ಗೆ ಅವಹೇಳನಕಾರಿ ಪದಗಳನ್ನು ಬಳಸಬಾರದು. ಅಸಹ್ಯವಾಗಿ ವರ್ತಿಸುವುದನ್ನು ನಿಲ್ಲಿಸುವಂತೆ ನಾನು ಎಲ್ಲರಲ್ಲೂ ಮನವಿ ಮಾಡುತ್ತೇನೆ. ನಾವು ಮತ್ತೊಬ್ಬರನ್ನು ಅವಮಾನಿಸುವುದೆಂದರೆ ಅದು ದೌರ್ಬಲ್ಯದ ಸಂಕೇತವಾಗುತ್ತದೆಯೇ ಹೊರತು ನಮ್ಮ ಶಕ್ತಿಯಲ್ಲ ಎಂದು ಬರೆದುಕೊಂಡಿದ್ದಾರೆ.

## ಕಾವೇರಿ ವಿಚಾರವಾಗಿ ಕಾನೂನು ತಜ್ಞರೊಂದಿಗೆ ಚರ್ಚೆ: ಡಿಕೆಶಿ

ಬೆಂಗಳೂರು: ತಮಿಳುನಾಡಿಗೆ ಕಾವೇರಿ ನೀರು ಹರಿಸುವ ವಿಚಾರವಾಗಿ ಕಾನೂನು ತಜ್ಞರ ಜೊತೆ ಚರ್ಚೆ ಮಾಡಲಾಗಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಜುಲೈ 31ರ ವರೆಗೆ ತಮಿಳುನಾಡಿಗೆ ನಿತ್ಯ 1 ಟಿಎಂಸಿ ನೀರು ಹರಿಸಬೇಕೆಂಬ ಕಾವೇರಿ ನೀರು ನಿಯಂತ್ರಣ ಸಮಿತಿ ಶಿಫಾರಸು ವಿಚಾರವಾಗಿ ಮಾಧ್ಯಮಗಳ ಪ್ರಶ್ನೆಗೆ ರೇಸ್ ಕೋರ್ಸ್ ರಸ್ತೆಯ ತಾಜ್ ವೆಸ್ಟ್ ಎಂಡ್ ಬಳಿ ಡಿಕೆಶಿ ಉತ್ತರಿಸಿದರು.

ಕಾವೇರಿ ನೀರಿನ ವಿಚಾರವಾಗಿ ಮುಂದೆ ಏನು ಮಾಡಬೇಕೆಂದು ಅನಿಲ್ ದಿವಾನ್, ಕಾತರಕಿ ಸೇರಿದಂತೆ ಕಾನೂನು ತಜ್ಞರ ತಂಡದ ಜೊತೆ ಚರ್ಚೆ ಮಾಡಿದ್ದು, ನೀರಾವರಿ ಇಲಾಖೆ ಅಧಿಕಾರಿಗಳ ಜೊತೆ ಮಾತುಕತೆ ನಡೆಸುತ್ತೇವೆ



ಎಂದರು.

ಮುಡಾ ವಿಚಾರದಲ್ಲಿ ಬಿಜೆಪಿ ರಾಜ–ಕೀಯ: ಮುಡಾ ಹಗರಣದ ಬಗ್ಗೆ ಬಿಜೆಪಿ ಟೀಕೆ ಬಗ್ಗೆ ಕೇಳಿದಾಗ, ಬಿಜೆಪಿಯವರು ರಾಜಕಾರಣ ಮಾಡುತ್ತಿದ್ದಾರೆ. ಅವರ ಆರೋಪದಲ್ಲಿ ಹುರುಳಿಲ್ಲ. ಸಮಯ ಬಂದಾಗ ನಾವು ಏನು ಉತ್ತರ ನೀಡಬೇಕೋ ನೀಡುತ್ತೇವೆ. ಮುಡಾದಲ್ಲಿ ಏನೇ ಹಗರಣ ನಡೆದಿದ್ದರೂ ಅದು ಬಿಜೆಪಿ ಅವಧಿಯಲ್ಲಿ ನಡೆದಿದೆ. ಈ ರಾಜಕೀಯ ಆರೋಪಗಳನ್ನು ನಾವು ಸಮರ್ಥವಾಗಿ ಎದುರಿಸುತ್ತೇವೆ ಎಂದು ತಿಳಿಸಿದರು.

ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ನಾಗೇಂದ್ರ ಅವರನ್ನು ಇ.ಡಿ ವಿಚಾರಣೆ ನಡೆಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, ವಾಲ್ಮೀಕಿ ನಿಗಮದ ಹಗರಣದ ಕುರಿತು ಎಸ್‌ಐಟಿ ವಿಚಾರಣೆ ನಡೆಸುತ್ತಿದೆ. ಇ.ಡಿ ವಿಚಾರಣೆ ಅವಶ್ಯಕತೆ ಇರಲಿಲ್ಲ. ಅವರ ತನಿಖೆ ಬಗ್ಗೆ ತಿಳಿದು ನಂತರ ಮಾತನಾಡುತ್ತೇನೆ ಎಂದು ಹೇಳಿದರು.

## 'ಇ–ಆಫೀಸ'ನ್ನು ಅನುಷ್ಠಾನಗೊಳಿಸದ ಅಧಿಕಾರಿಗಳಿಗೆ 'ಕಂದಾಯ ಇಲಾಖೆ'ಯಿಂದ ನೋಟಿಸ್



ಬೆಂಗಳೂರು: ರಾಜ್ಯದ ಕೆಲ ಕಚೇ–ರಿಗಳಲ್ಲಿ ಇ–ಆಫೀಸ್ ಅನುಷ್ಠಾನಗೊಳಿಸಿಲ್ಲ. ರಾಜ್ಯಾದ್ಯಂತ ಸರ್ಕಾರಿ ಕಚೇರಿಗಳಲ್ಲಿ ಇ–ಆಫೀಸ್ ಕಡ್ಡಾಯಗೊಳಿಸಿದ್ದರೂ, ಕೆಲ ಅಧಿಕಾ–ರಿಗಳು ಜಾರಿಗೊಳಿಸುವಲ್ಲಿ ನಿರ್ಲಕ್ಷ್ಯ ತೋರಿದ್ದರು. ಇವರಿಗೆ ಬಿಗ್ ಶಾಕ್ ಎನ್ನುವಂತೆ ಕಂದಾಯ ಇಲಾಖೆಯು ಇ–ಆಫೀಸ್ ಅನುಷ್ಠಾನಗೊಳಿಸದಂತ ಅಧಿಕಾರಿಗಳಿಗೆ ನೋಟಿಸ್ ನೀಡೋದಕ್ಕೆ ಮುಂದಾಗಿದೆ. ಈ ಸಂಬಂಧ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು, ಕಂದಾಯ ಇಲಾಖೆಯ ಉನ್ನತ ಅಧಿಕಾರಿಗಳ ಜೊತೆಗೆ ಮಹತ್ವದ ಸಭೆ ನಡೆಸಿ, ಚರ್ಚಿಸಿದ್ದಾರೆ.

ಇ– ಆಫೀಸ್ ಅನ್ನು ನಾಡಕಚೇರಿಗೂ ವಿಸ್ತರಿಸುವ ಹಾಗೂ ತಾಲೂಕು ಮಟ್ಟದಲ್ಲಿ ಈವರೆಗೆ ಇ–ಆಫೀಸನ್ನು ಅನುಷ್ಠಾನಗೊಳಿಸದ ಅಧಿಕಾರಿಗಳಿಗೆ ನೋಟೀಸ್ ಜಾರಿಗೊಳಿಸುವ ಸಂಬಂಧ ಇಂದು ಅಧಿಕಾರಿಗಳ ಜೊತೆ ಚರ್ಚಿಸಲಾಯಿತು.

## ಜು.15ರಿಂದ ನಡೆಯುವ ಮಳೆಗಾಲದ ಅಧಿವೇಶನಕ್ಕೆ ವಿಧಾನಸೌಧದಲ್ಲಿ ಸಕಲ ಸಿದ್ಧತೆ



ಬೆಂಗಳೂರು: ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮಳೆಗಾಲದ ಅಧಿವೇಶನ ಜುಲೈ 15ರಿಂದ ಆರಂಭವಾಗಲಿರುವ ಹಿನ್ನೆಲೆಯಲ್ಲಿ ವಿಧಾನಸೌಧದಲ್ಲಿ ಸಿದ್ಧತಾ ಕಾರ್ಯಗಳು ಚುರುಕುಗೊಂಡಿವೆ.

ಸಕಲ ಸಿದ್ಧತೆಗಳು ನಡೆಯುತ್ತಿವೆ. ವಿಧಾನಸಭೆ ಪ್ರವೇಶದ್ವಾರವನ್ನು ನವೀಕರಿಸಲಾಗುತ್ತಿದೆ. ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಸಭಾಂಗಣ, ಮೊಗಸಾಲೆಗಳನ್ನು ಶುಚಿಗೊಳಿಸಲಾಗುತ್ತಿದೆ. ಉಭಯ ಸದನಗಳ ಪ್ರವೇಶ ದ್ವಾರಗಳಲ್ಲಿ ಅಲಂಕಾರಿಕ ಗಿಡಗಳನ್ನು ಇಟ್ಟು ಶೃಂಗರಿಸಲಾಗುತ್ತಿದೆ.

ವಿಧಾನಸಭಾಧ್ಯಕ್ಷರ ಹಾಗೂ ವಿಧಾನ ಪರಿಷತ್ ಸಭಾಪತಿಗಳ ಪೀಠದ ಇಕ್ಕೆಲಗಳಲ್ಲಿ ವಿಶೇಷ ಅಲಂಕಾರಿಕ ಗಿಡಗಳು, ಹೂವುಗಳಿಂದ ವಿಶೇಷವಾಗಿ ಅಲಂಕರಿಸಲಾಗುತ್ತದೆ. ಅಧಿವೇಶನಕ್ಕೆ ಇನ್ನೆರಡು ದಿನ ಬಾಕಿ ಉಳಿದಿರುವುದರಿಂದ ಉಭಯ ಸದನಗಳ ಸಿಬ್ಬಂದಿ ಸಿದ್ಧತಾ ಕಾರ್ಯದಲ್ಲಿ ನಿರತರಾಗಿದ್ದಾರೆ. ವಿಧಾನಸೌಧದ ಪ್ರವೇಶ ದ್ವಾರಗಳು, ಕಾರಿಡಾರ್‌ಗಳನ್ನು ಶುಚಿಗೊಳಿಸುವ ಕಾರ್ಯ ನಡೆಯುತ್ತಿದೆ. ಹೀಗಾಗಿ ವಿಧಾನಸೌಧದ ಆವರಣದಲ್ಲೂ ಹೊಸ ಸೊಬಗು ಕಂಡುಬರುತ್ತಿದೆ. ಮಳೆಗಾಲವಾಗಿರುವುದ–ರಿಂದ ವಿಧಾನಸೌಧದ ಆವರಣದಲ್ಲಿ ಹಚ್ಚ ಹಸಿ–ರಿನ ವಾತಾವರಣವಿದೆ. ಗಿಡಗಳು ಹೂವುಗಳಿಂದ ಕಂಗೊಳಿಸುತ್ತಿವೆ. ಈ ಬಾರಿಯ ಅಧಿವೇಶನಕ್ಕೆ ವಿಧಾನಸೌಧದಲ್ಲಿ ಹೊಸ ಮೆರುಗು ಮೂಡಿದೆ.

## ಸಾಲ ತೀರಿಸಲು ಬಾಲಕಿಯನ್ನೇ ಮಾರಾಟ ಮಾಡಿದ ಚಿಕ್ಕಮ್ಮ



ತುಮಕೂರು: ಸಾಲ ತೀರಿಸಲು ಚಿಕ್ಕಮ್ಮನೇ ಬಾಲಕಿಯನ್ನು ಮಾರಾಟ ಮಾಡಿದ ಅಮಾನವೀಯ ಘಟನೆ ಬೆಳಕಿಗೆ ಬಂದಿದೆ. ಆಂಧ್ರಪ್ರದೇಶದ ಹಿಂದೂಪುರದಲ್ಲಿ ಈ ಘಟನೆ ನಡೆದಿದೆ.

ತುಮಕೂರು ನಗರದ ದಿಬ್ಬೂರು ನಿವಾಸಿ ಚೌಡಮ್ಮ ಎಂಬುವವರ ಪುತ್ರಿಯನ್ನು ಚೌಡಮ್ಮ ಸಹೋದರಿ ಸುಜಾತಾ ಮಾರಾಟ ಮಾಡಿದ್ದಾರೆ. ಚೌಡಮ್ಮ ತನ್ನ ಮಗಳನ್ನು ಸಹೋದರಿ ಸುಜಾತಾ ಅವರ ಬಳಿ ಕಳುಹಿಸಿದ್ದರಂತೆ. ಸುಜಾತಾ ಮಗಳ ಬಾಣಂತನಕ್ಕೆಂದು ಹಿಂದೂಪುರಕೆ ತೆರಳಿದ್ದರು. ಈ ವೇಳೆ ಬಾಲಕಿಯನ್ನು ಕರೆದುಕೊಂಡು ಹೋಗಿದ್ದರು. ಮಗಳನ್ನು ಕರೆತರಲೆಂದು ಹಿಂದೂಪುರಕ್ಕೆ ಚೌಡಮ್ಮ ಹೋಗಿದ್ದಾಗ ಘಟನೆ ಬೆಳಕಿಗೆ ಬಂದಿದೆ.

ಬಾತುಕೋಳಿಗಳನ್ನು ಮೇಯಿಸಲು ಇದ್ದ ಶ್ರೀರಾಮುಲು ಎಂಬಾತನಿಗೆ ಬಾಲಕಿಯನ್ನು ಚಿಕ್ಕಮ್ಮ ಸುಜಾತಾ 35 ಸಾವಿರ ರೂಪಾಯಿಗೆ ಮಾರಾಟ ಮಾಡಿದ್ದಾಳೆ. ಸಾಲ ತೀರಿಸಲಾಗದೇ ಅಕ್ಕನ ಮಗಳನ್ನೇ ಮಾರಾಟ ಮಾಡಿದ್ದಾಳೆ ಮಹಿಳೆ. ವಿಷಯ ತಿಳಿದು ಚೌಡಮ್ಮ ತನ್ನ ಮಗಳನ್ನು ಕಳುಹಿಸುವಂತೆ ಆರೋಪಿ ಶ್ರೀರಾಮುಲುಗೆ ಕೇಳಿಕೊಂಡಿದ್ದಾರೆ. ಆದರೆ ಬಾಲಕಿಯನ್ನು ತಾನು ಖರೀದಿ ಮಾಡಿದ್ದಾಗಿ ಆತ ಹೇಳಿದ್ದಾನೆ. ಸಾಲದ ಹಣ ಕೊಟ್ಟು ಬಾಲಕಿಯನ್ನು ಕರೆದುಕೊಂಡು ಹೋಗಿ ಎಂದಿದ್ದಾನಂತೆ. ಬೇರೆ ದಾರಿ ಕಾಣದೇ ತುಮಕೂರಿಗೆ ವಾಪಾಸ್ ಆದ ಚೌಡಮ್ಮ, ಮಗಳ ಸ್ಥಿತಿ ಬಗ್ಗೆ ಕಾರ್ಮಿಕ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಮಾಹಿತಿ ಆಧರಿಸಿ ಅಧಿಕಾರಿಗಳು ಪೊಲೀಸರಿಗೆ ದೂರು ನೀಡಿದ್ದಾರೆ. ತಕ್ಷಣ ಎಚ್ಚೆತ್ತ ತುಮಕೂರು ಪೊಲೀಸರು ಬಾಲಕಿಯನ್ನು ರಕ್ಷಿಸಿ ಕರೆತಂದಿದ್ದು, ತುಮಕೂರು ಬಾಲ ಮಂದಿರದಲ್ಲಿ ಇರಿಸಿದ್ದಾರೆ. ತುಮಕೂರು ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿ ಶ್ರೀರಾಮುಲು ನಾಪತ್ತೆಯಾಗಿದ್ದು, ಆತನಿಗಾಗಿ ಪೊಲೀಸರು ಹುಡುಕಾಟ ನಡೆಸಿದ್ದಾರೆ.

## ಅಪರ್ಣಾ ನಿಧನಕ್ಕೆ ಗಣ್ಯಮಾನ್ಯರಿಂದ ಸಂತಾಪ

ಬೆಂಗಳೂರು: ಕ್ಯಾನ್ಸರ್ನಿಂದ ಬಳಲುತ್ತಿದ್ದ ಅಪರ್ಣಾ ಅವರಿಂದು ಬೆಂಗಳೂರಿನ ಬನಶಂಕರಿಯಲ್ಲಿರುವ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದಿದ್ದಾರೆ. ಪುಟ್ಟಣ್ಣ ಕಣಗಾಲ್ ಅವರ ?ಮಸಣದ ಹೂವು' ಚಿತ್ರದ ಮೂಲಕ ಸಿನಿರಂಗಕ್ಕೆ ಕಾಲಿಟ್ಟಿದ್ದ ಅಪರ್ಣಾ ಅವರು ಹಿಂದಿರುಗಿ ನೋಡಿರಲಿಲ್ಲ. ನಟನೆ, ನಿರೂಪಣೆ, ಕಿರುತೆರೆಯಲ್ಲಿ ಅವರು ಮಿಂಚಿದ್ದರು. ಅವ–ರಿಂದು ತಮ್ಮ ಮಾತುಗಳಿಗೆ ಪೂರ್ಣ ವಿರಾಮವನ್ನಿಟ್ಟಿದ್ದಾರೆ.

ಅಪರ್ಣಾ ಅವರ ನಿಧನಕ್ಕೆ ಸಿಎಂ ಸಿದ್ದರಾಮಯ್ಯ ಸೇರಿದಂತೆ ಗಣ್ಯಮಾನ್ಯರು ಸಂತಾಪ ಸೂಚಿಸಿದ್ದಾರೆ. ನಟಿ, ಖ್ಯಾತ ನಿರೂಪಕಿ ಅಪರ್ಣಾ ಅವರ ನಿಧನದ ಸುದ್ದಿ ತಿಳಿದು ನೋವಾಯಿತು. ಸರ್ಕಾರಿ ಸಮಾರಂಭಗಳು ಸೇರಿದಂತೆ ಕನ್ನಡದ ಪ್ರಮುಖ ವಾಹಿನಿಗಳ ಕಾರ್ಯಕ್ರಮಗಳಲ್ಲಿ ಕನ್ನಡ ಭಾಷೆಯಲ್ಲಿ ಅತ್ಯಂತ ಸೊಗಸಾಗಿ ನಿರೂಪಣೆ ಮಾಡುತ್ತಾ ನಾಡಿನ ಮನೆಮಾತಾಗಿದ್ದ ಬಹುಮುಖ ಪ್ರತಿಭೆಯೊಂದು ಬಹುಬೇಗ ನಮ್ಮನ್ನು ಅಗಲಿರುವುದು ದುಃಖದ ಸಂಗತಿ. ಮೃತ ಅಪರ್ಣಾಳ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಕುಟುಂಬಸ್ಥರಿಗೆ ದುಃಖ ಭರಿಸುವ ಶಕ್ತಿ ಸಿಗಲೆಂದು ಪ್ರಾರ್ಥಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ.

ಬಸವರಾಜ ಬೊಮ್ಮಾಯಿ: ಕನ್ನಡದ ಖ್ಯಾತ ನಿರೂಪಕಿ ಅಪರ್ಣಾ ಅವರ ನಿಧನದ ಸುದ್ದಿ ಕೇಳಿ ಮನಸಿಗೆ ಅತ್ಯಂತ ನೋವಾಯಿತು. ಸರಳ ಕನ್ನಡದಲ್ಲಿ ಸುಂದರವಾಗಿ ಕಾರ್ಯಕ್ರಮಗಳನ್ನು



ನಿರೂಪಣೆ ಮಾಡುವ ಮೂಲಕ ಎಲ್ಲರ ಮನೆ ಮಾತಾಗಿದ್ದರು. ಅವರ ಅಗಲಿಕೆಯಿಂದ ಕನ್ನಡ ನಾಡು ಒಬ್ಬ ಸಜ್ಜನಿಕೆಯ ನಿರೂಪಕಿಯನ್ನು ಕಳೆದುಕೊಂಡಂತಾಗಿದೆ. ದೇವರು ಅವರ ಆತ್ಮಕ್ಕೆ ಶಾಂತಿ ನೀಡಲಿ, ಅವರ ಅಗಲಿಕೆಯ ದುಖವನ್ನು ಭರಿಸುವ ಶಕ್ತಿಯನ್ನು ಅವರ ಅಭಿಮಾನಿಗಳು ಹಾಗೂ ಕುಟುಂಬ ವರ್ಗಕ್ಕೆ ದಯಪಾಲಿಸಲಿ ಎಂದು ಪ್ರಾರ್ಥಿಸುತ್ತೇನೆ.

ಕನ್ನಡದ ಖ್ಯಾತ ನಿರೂಪಕಿ ಅಪರ್ಣಾ ಅವರ ನಿಧನದ ಸುದ್ದಿ ಕೇಳಿ ಮನಸಿಗೆ ಅತ್ಯಂತ ನೋವಾಯಿತು.

ಸರಳ ಕನ್ನಡದಲ್ಲಿ ಸುಂದರವಾಗಿ ಕಾರ್ಯಕ್ರಮಗಳನ್ನು ನಿರೂಪಣೆ ಮಾಡುವ ಮೂಲಕ ಎಲ್ಲರ ಮನೆ ಮಾತಾಗಿದ್ದರು.

ಅವರ ಅಗಲಿಕೆಯಿಂದ ಕನ್ನಡ ನಾಡು ಒಬ್ಬ ಸಜ್ಜನಿಕೆಯ ನಿರೂಪಕಿಯನ್ನು ಕಳೆದುಕೊಂಡಂತಾಗಿದೆ.

ಸಂತೋಷ್ ಲಾಡ್: ತಮ್ಮ ಅದ್ಭುತ ಮಾತುಗಾರಿಕೆಯಿಂದ ಹೆಸರು ಮಾಡಿದ್ದ ಖ್ಯಾತ ನಿರೂಪಕಿ, ನಟಿ ಅಪರ್ಣಾ ಅವರ ಅಕಾಲಿಕ ನಿಧನ ನಿಜಕ್ಕೂ ಬೇಸರ ತರಿಸಿದೆ. ಅಪರ್ಣಾ ಅವರಾಡುತ್ತಿದ್ದ ಶುದ್ಧ ಕನ್ನಡ ಭಾಷೆಯನ್ನು ಕೇಳುವುದೇ ಅನನ್ಯ ಅನುಭವ. ಅವರ ನಿಧನ ಯಾವತ್ತಿಗೂ ತುಂಬಲಾರದ ನಷ್ಟ. ಅಪರ್ಣಾ ಅವರ ಆತ್ಮಕ್ಕೆ ಪರಮಾತ್ಮನು ಶಾಂತಿ ಕರುಣಿಸಲಿ, ಅವರ ಕುಟುಂಬಕ್ಕೆ ಈ ಅಗಲಿಕೆಯ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸೋಣ.

**ಜಮೀರ್ ಅಹಮದ್ ಖಾನ್:**

ಕನ್ನಡದ ಪ್ರಮುಖ ವಾಹಿನಿಗಳ ಕಾರ್ಯಕ್ರಮಗಳಲ್ಲಿ ಕನ್ನಡದಲ್ಲಿ ಸೊಗಸಾಗಿ ನಿರೂಪಣೆ ಮಾಡಿ ಮನೆಮಾತಾಗಿದ್ದ ಬಹುಮುಖ ಪ್ರತಿಭೆ ಅಪರ್ಣಾ ಅವರ ಅಗಲಿಕೆ ಕಿರುತೆರೆ ಹಾಗೂ ಚಲನ ಚಿತ್ರ ರಂಗಕ್ಕೆ ಅಪಾರ ನಷ್ಟ. ಅಪರ್ಣಾ ಅವರ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಕುಟುಂಬಸ್ಥರಿಗೆ ದುಃಖ ಭರಿಸುವ ಶಕ್ತಿ ಸಿಗಲೆಂದು ಭಗವಂತ ನಲ್ಲಿ ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.

ಡಿಕೆ ಶಿವಕುಮಾರ್:

ಸ್ಪಷ್ಟ ಕನ್ನಡದ ಮೂಲಕ ನಿರೂಪಣೆ ಮಾಡಿ ಕನ್ನಡಿಗರ ಮನ ಗೆದ್ದ, ಖ್ಯಾತ ನಿರೂಪಕಿ, ನಟಿ ಶ್ರೀಮತಿ ಅಪರ್ಣ ಅವರ ಸಾವಿನಿಂದ ಮನಸ್ಸಿಗೆ ಅಪಾರ ನೋವುಂಟಾಗಿದೆ.

ಅವರ ನಿಧನವು ಕಲಾ ಲೋಕಕ್ಕೆ ತುಂಬಲಾರದ ನಷ್ಟ. ನಿರೂಪಕಿಯಾಗಿ, ನಟಿಯಾಗಿ ದಶಕಗಳಿಂದ ದುಡಿದ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಅವರ ಕುಟುಂಬ ಹಾಗೂ ಸ್ನೇಹಿತರಿಗೆ ನನ್ನ ಸಾಂತ್ವನಗಳು.

# ತಂಬಾಕು ಉತ್ಪನ್ನಗಳ ದುಷ್ಪರಿಣಾಮ ಕುರಿತು ಅರಿವು ಮೂಡಿಸಿ: ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್




ಬಳ್ಳಾರಿ: ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ದುಷ್ಪರಿಣಾಮ ಕುರಿತು ಸಾರ್ವಜನಿಕ ವಲಯದಲ್ಲಿ ಅರಿವು ಮೂಡಿಸುವ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಸಹಕಾರವೂ ಅಗತ್ಯವಿದೆ ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ತಿಳಿಸಿದರು.

ನಗರದ ಹೊಸ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂಗಡಿ, ಹೋಟಲ್, ಬೇಕರಿ, ಲಾಡ್ಜ್, ಬಾರ್ ಮತ್ತು ರೆಸ್ಟೋರೆಂಟ್ ಹಾಗೂ ಇತರೇ ವಾಣಿಜ್ಯ ಮಳಿಗೆಗಳಲ್ಲಿ ಕಡ್ಡಾಯವಾಗಿ ಕೋಟ್ಪಾ ಕಾಯ್ದೆಗೆ ಸಂಬಂಧಿಸಿದ ನಾಮಫಲಕಗಳನ್ನು ಹಾಕಬೇಕು.

ಈ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು. ನಾಮಫಲಕ ಹಾಕದ ಅಂಗಡಿಗಳಿಗೆ ನೋಟಿಸ್ ಜಾರಿ ಮಾಡಬೇಕು ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಒಟ್ಟು 1308 ಶಾಲೆಗಳಲ್ಲಿ 1267 ಶಾಲೆಗಳನ್ನು ತಂಬಾಕು ಮುಕ್ತ ಶಾಲೆಗಳನ್ನಾಗಿ ಘೋಷಣೆ ಮಾಡಲಾಗಿದ್ದು, ಬಾಕಿ ಉಳಿದ 41 ಶಾಲೆಗಳನ್ನು ತಂಬಾಕು ಮುಕ್ತ ಶಾಲೆಗಳಾಗಿ ಘೋಷಿಸಲಾಗುವುದು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ಜಿಲ್ಲೆಯ 75 ಪದವಿ ಪೂರ್ವ ಕಾಲೇಜುಗಳ ಪೈಕಿ 62 ಕಾಲೇಜುಗಳಲ್ಲಿ ಸೆಕ್ಷನ್–4 ಮತ್ತು ಸೆಕ್ಷನ್–6ಬಿ ನಾಮಫಲಕಗಳು ಅಳವಡಿಸಲಾಗಿದ್ದು, ಬಾಕಿ ಉಳಿದ ಕಾಲೇಜುಗಳಲ್ಲಿ ಈ ಕೂಡಲೇ ನಾಮಫಲಕ ಅಳವಡಿಸಲು ಕ್ರಮ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳು, ಡಿಡಿಪಿಯು ಅವರಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಆಹಾರ ಮಾರಾಟಕ್ಕೆ ಸಂಬಂಧಿಸಿದಂತೆ 2093 ಪರವಾನಿಗೆ ಪಡೆದ ಅಂಗಡಿ, ಬೇಕರಿ, ಹೋಟೆಲ್ಗಳಿದ್ದು, ಅವುಗಳಲ್ಲಿ 1407 ಸೆಕ್ಷನ್ – 4 ನಾಮಫಲಕ ಅಳವಡಿಸಲಾಗಿದೆ ಹಾಗೂ ಬಾಕಿ ಉಳಿದ 686 ಸ್ಥಳಗಳಲ್ಲಿ ನಾಮಫಲಕ ಅಳವಡಿಸಲಾಗುವುದು ಎಂದು ಆಹಾರ ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು. ಜಿಲ್ಲೆಯಲ್ಲಿರುವ ಎಲ್ಲಾ ಗ್ರಾಪಂಗಳಲ್ಲಿ ಹಾಗೂ ಗ್ರಾಮಗಳಲ್ಲಿ ತಂಬಾಕು ನಿಯಂತ್ರಣ ಸಮಿತಿಗಳನ್ನು ರಚಿಸಲಾಗಿದ್ದು, ನಿಮಮಾನುಸಾರ ಸಭೆ ನಡೆಸಿ ಕೋಟ್ಪಾ–2003ರ ಸೆಕ್ಷನ್ 4,5,6ಎ ಮತ್ತು 7ರ ಅನುಷ್ಠಾನಗೊಳಿಸಬೇಕು ಹಾಗೂ ಕಾರ್ಯಾಚರಣೆ ನಡೆಸಿ ದಂಡ ಸಂಗ್ರಹಿಸುವಂತೆ ಅವರು ಸೂಚಿಸಿದರು.

ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಬಸ್ ನಿಲ್ದಾಣಗಳಲ್ಲಿ ತಂಬಾಕು ಉತ್ಪನ್ನಗಳ ಬಳಕೆ ಹೆಚ್ಚಾಗಿ ಕಂಡುಬರುತ್ತಿದ್ದು, ಕಡಿವಾಣ ಹಾಕಬೇಕು ಮತ್ತು ದಂಡ ವಿಧಿಸಬೇಕು ಎಂದು ಕೆಕೆಆರ್ಟಿಸಿ ನಿಗಮದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕಸ ವಿಲೇವಾರಿ ವಾಹನಗಳ ಮೈಕ್ ಮೂಲಕ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ಪರಿಣಾಮ ಕುರಿತು 2 ನಿಮಿಷಗಳ ಜಿಂಗಲ್ ಮೂಲಕ ಪ್ರಚಾರ ನೀಡಬೇಕು ಎಂದು ತಿಳಿಸಿದರು.

ಕೋಟ್ಪಾ ಕಾಯ್ದೆಗೆ ಸಂಬಂಧಿಸಿದಂತೆ ವಿವಿಧ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ. ರಮೇಶ್ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎನ್.ಬಸರೆಡ್ಡಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೆಸ್ಕಾಂ ಜನಸಂಪರ್ಕ ಸಭೆ

ಶಿವಮೊಗ್ಗ: ಶಿವಮೊಗ್ಗ ಮೆಸ್ಕಾಂ ಗ್ರಾಮೀಣ ಉಪವಿಭಾಗದ ಸಹಾಯಕ ಕಾರ್ಯನಿರ್ವಾಯಕ ಇಂಜಿನಿಯರ್ ಕಚೇರಿ, ಬಾಲರಾಜ್ ಅರಸ್ರಸ್ತೆ, ರೈಲ್ವೆ ಸ್ಟೇಷನ್ ಹತ್ತಿರ, ಮೆಸ್ಕಾಂ ಕಚೇರಿಯಲ್ಲಿ ದಿ: 15.07.2024ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನ ಸಂಪರ್ಕ ಸಭೆ ನಡೆಯಲ್ಲಿದೆ.

ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಕುಂದು ಕೊರತೆ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ವಿದ್ಯುತ್ ತಗುಲಿ ವಿದ್ಯಾರ್ಥಿ ಸಾವು



ಶಿವಮೊಗ್ಗ: ವಿದ್ಯುತ್ ತಂತಿ ತಗುಲಿ ವಿದ್ಯಾರ್ಥಿಯೊಬ್ಬ ಮೃತಪಟ್ಟಿರುವ ಘಟನೆ ಶಿವಮೊಗ್ಗ ಜಿಲ್ಲೆಯ ಗವಟೂರು ಗ್ರಾಮದ ಹಳಿಯೂರಲ್ಲಿ ನಡೆದಿದೆ.

ಕಾರ್ತಿಕ್ (20 ಮೃತಪಟ್ಟ ಯುವಕ. ಕಾರ್ತಿಕ್ ರಿಪ್ಪನ್ ಪೇಟೆ ಸರ್ಕಾರಿ ಪದವಿ ಕಾಲೇಜಿನಲ್ಲಿ ಪ್ರಥಮ ವರ್ಷದ ಬಿಬಿಎ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿದ್ದರು. ಬೆಳಿಗ್ಗೆ ಮನೆ ಅಂಗಳದ ಕೈ ತೋಟದಲ್ಲಿ ಕೆಲಸ ಮಾಡುವಾಗ ಕಾಡುಪ್ರಾಣಿಗಳ ಹಾವಳಿ ತಡೆಗೆ ಬೇಲಿಗೆ ಅಳವಡಿಸಿದ್ದ ವಿದ್ಯುತ್ ಸ್ಪರ್ಶದಿಂದ ಕಾರ್ತಿಕ್ ಗಂಭೀರವಾಗಿ ಗಾಯಗೊಂಡಿದ್ದರು.

ತಕ್ಷಣವೇ ಅವರನ್ನು ಸ್ಥಳೀಯ ಆಸ್ಪತ್ರೆಗೆ ಕರೆ ತಂದು ಪ್ರಥ–'ಮ ಚಿಕಿತ್ಸೆ ಕೊಡಿಸಿ, ವೈದ್ಯರ ಸಲಹೆ ಮೇರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆಗೆ ಸ್ಪಂದಿಸದ ಅವರು ಮೃತ ಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

## ಜು.20 ರಂದು 'ತಿಂಗಳ ಸೊಬಗು' ಸಾಂಸ್ಕೃತಿಕ ಕಾರ್ಯಕ್ರಮ

ಬಳ್ಳಾರಿ: ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆ ಮತ್ತು ಸಾಂಸ್ಕೃತಿಕ ಸಮುಚ್ಛಯ ನಿರ್ವಹಣಾ ಸಮಿತಿ ವತಿಯಿಂದ ಕಲಾ ಪ್ರತಿಭೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಜುಲೈ 20 ರಂದು ಸಂಜೆ 06.30 ಗಂಟೆಗೆ ನಗರದ ಡಾ.ರಾಜ್ಕುಮಾರ್ ರಸ್ತೆಯ ನಾಡೋಜ ಸುಭದ್ರಮ್ಮ ಮನ್ಸೂರು ಬಯಲು ರಂಗಮಂದಿರ ಸಾಂಸ್ಕೃತಿಕ ಸಮುಚ್ಛಯದಲ್ಲಿ 'ತಿಂಗಳ ಸೊಬಗು' ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಬಳ್ಳಾರಿಯ ಪ್ರಕಾಶ್ ಹೆಮ್ಮಾಡಿ ಅವರಿಂದ ಜಾನಪದ ಜಾದು ಕಾರ್ಯಕ್ರಮ ಮತ್ತು ಸಿರುಗುಪ್ಪ ತಾಲ್ಲೂಕಿನ ಸಿರಿಗೇರಿಯ ಧಾತ್ರಿ ರಂಗ ಸಂಸ್ಥೆಯಿಂದ 'ಶ್ರೀ ಕೃಷ್ಣ ಸಂಧಾನ' ಹಾಸ್ಯ ನಾಟಕ ಕಾರ್ಯಕ್ರಮ ಇರಲಿವೆ.

ಸಾರ್ವಜನಿಕರಿಗೆ ಪ್ರವೇಶ ಮುಕ್ತವಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ವೀಕ್ಷಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ಕೋರಲಾಗಿದೆ.

## ಅಮೃತ ಸ್ವಾಭಿಮಾನಿ ಕುರಿಗಾಹಿ ಯೋಜನೆಯಡಿ ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಬಳ್ಳಾರಿ: ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದಿಂದ ಪ್ರಸ್ತಕ ಸಾಲಿನ ಅಮೃತ ಸ್ವಾಭಿಮಾನಿ ಕುರಿಗಾಹಿ ಯೋಜನೆ (20+1) ಅಡಿ ನಿಗಮದಲ್ಲಿ ನೋಂದಣಿಯಾಗಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಸದಸ್ಯರಾಗಿರುವವರಿಗೆ ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಬಳ್ಳಾರಿ ಜಿಲ್ಲೆಗೆ ನಿಗದಿಯಾದ 77 ಗುರಿಗಳಲ್ಲಿ ಪರಿಶಿಷ್ಟ ಜಾತಿ 12, ಪರಿಶಿಷ್ಟ ಪಂಗಡ 04, ಅಲ್ಪಸಂಖ್ಯಾತ 12, ಅಂಗವಿಕಲ 03 ಹಾಗೂ ಸಾಮಾನ್ಯ ವರ್ಗದ 46 ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು. ಆಸಕ್ತರು ನಿಗದಿತ ಅರ್ಜಿ ನಮೂನೆಯನ್ನು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಹೊಸಪೇಟೆ, ವಿಜಯನಗರ ಜಿಲ್ಲೆ ಹಾಗೂ ಹತ್ತಿರದ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದಿಂದ ಪಡೆದುಕೊಂಡು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಸಂಬಂಧಿಸಿದ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳಿಗೆ ನೀಡಬೇಕು. ಅರ್ಜಿ ಸಲ್ಲಿಸಲು ಜು.20 ಕೊನೆಯ ದಿನವಾಗಿದೆ ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.13 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ: ನಗರದ ಜಿಲ್ಲಾ ಕೋರ್ಟ್ ಸಂಕೀರ್ಣ ವ್ಯಾಪ್ತಿಯಲ್ಲಿನ ವಿದ್ಯುತ್ ಲೈನಿನ ನಿರ್ವಹಣೆ ಕಾರ್ಯವನ್ನು ತುರ್ತಾಗಿ ಕೈಗೊಳ್ಳುತ್ತಿರುವುದರಿಂದ ಜು.13 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 06 ಗಂಟೆಯವರೆಗೆ 11.ಕೆ.ವಿ ಫೀಡರ್ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ನಗರ ಜೆಸ್ಕಾಂನ ಉಪವಿಭಾಗ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಅಶೋಕ್ ರೆಡ್ಡಿ ಅವರು ತಿಳಿಸಿದ್ದಾರೆ.

*ವಿದ್ಯುತ್ ಕಡಿತಗೊಳ್ಳುವ ಪ್ರದೇಶಗಳು*:

ಎಫ್–6 ಫೀಡರ್ನ ತಾಳೂರು ರಸ್ತೆ, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರೋಡ್, ರಾಮ ನಗರ, ಹವಂಬಾವಿ ಮತ್ತು ಎಫ್–14 ಫೀಡರ್ ವ್ಯಾಪ್ತಿಯ ಜಿಲ್ಲಾ ಕೋರ್ಟ್ ಸಂಕೀರ್ಣ.

ಎಫ್–13 ಫೀಡರ್ ವ್ಯಾಪ್ತಿಯ ದೇವಿನಗರ, ಸಿರುಗುಪ್ಪಾ ರಸ್ತೆ, ಇಂದಿರ ನಗರ, ಸಂಜಯನಗರ, ಶಿವಲಿಂಗ ನಗರ, ಶಾಸ್ತ್ರೀನಗರ, ಬಸವನಕುಂಟೆ, ಎಂ.ಕೆ.ನಗರ, ಹವಂಬಾವಿ, ಅಶೋಕ ನಗರ, ಶ್ರೀನಿವಾಸ ನಗರ, ಕುರಿಹಟ್ಟಿ, ಎಸ್.ಪಿ. ಸರ್ಕಲ್, ವೀರಣ್ಣಗೌಡ ನಗರ, ರಾಜೇಶ್ವರಿ ನಗರ, ಕೆ.ಎಂ.ಎಫ್, ಭುವನಗಿರಿ ಕಾಲೋನಿ, ಎಸ್. ಎಲ್.ವಿ ಕಾಲೋನಿ, ಶಿವಗಿರಿ ಕಾಲೋನಿ, ರಾಮನಗರ, ಶ್ರೀನಿವಾಸ ನಗರ, ಸೂರ್ಯ ಕಾಲೋನಿ ಪ್ರದೇಶಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ; ಹೆಚ್ಐವಿ ಸೇರಿದಂತೆ ಇತರೆ ರೋಗಗಳ ಪತ್ತೆ ಹಾಗೂ ಚಿಕಿತ್ಸೆ ನೀಡುವ ಸಂಚಾರಿ ವಾಹನಕ್ಕೆ ಮೇಯರ್ ಮುಲ್ಲಂಗಿ ನಂದೀಶ್ ಚಾಲನೆ

ಬಳ್ಳಾರಿ: ಜಿಲ್ಲೆಯಲ್ಲಿ ಹೆಚ್ಐವಿ ಸೋಂಕು ಸೇರಿದಂತೆ ಇತರೆ ರೋಗಗಳನ್ನು ಸಕಾಲದಲ್ಲಿ ಗುರ್ತಿಸಿ ಚಿಕಿತ್ಸೆ ನೀಡುವ ಸಂಚಾರಿ ಜಾಗೃತಿ ವಾಹನಕ್ಕೆ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್ ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಆವರಣದಲ್ಲಿ ಗುರುವಾರ ಚಾಲನೆ ನೀಡಿದರು.



ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಮೂಲಕ ಒದಗಿಸಲಾದ ಸುಸಜ್ಜಿತ ಸಂಚಾರಿ ಪ್ರಯೋಗಾಲಯ, ಆಪ್ತಸಮಾಲೋಚನೆ ಹಾಗೂ ಜನಜಾಗೃತಿ ನೀಡಲು ಎಲ್ಇಡಿ ಟಿವಿ ಹೊಂದಿದ ವಾಹನಕ್ಕೆ ಚಾಲನೆ ನೀಡಿ, ಬಳಿಕ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ ರಾಜ್ಯ ಸರ್ಕಾರವು ಹೆಚ್ಚಿನ ಮುತುವರ್ಜಿ ವಹಿಸುತ್ತಿದ್ದು, ಜಿಲ್ಲೆಗೆ ಹಸ್ತಾಂತರಿಸಲಾದ ಸುಸಜ್ಜಿತ ವಾಹನವು ಗ್ರಾಮೀಣ ಪ್ರದೇಶ ಒಳಗೊಂಡಂತೆ ನಗರದ ಕೊಳಚೆ ಪ್ರದೇಶಗಳ ಜನತೆಗೆ ಹೆಚ್ಚಿನ ರೀತಿಯಲ್ಲಿ ಸದುಪಯೋಗವಾಗುವಂತೆ ನಿಗಾವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ, ಪ್ರಸ್ತುತ ಜಿಲ್ಲೆಗೆ ಒದಗಿಸಲಾದ ಸಂಚಾರಿ ವಾಹನದಲ್ಲಿ ಸುಸಜ್ಜಿತ ಪ್ರಯೋಗಾಲಯ ಮತ್ತು ಆಪ್ತ ಸಮಾಲೋಚನೆಯ ಪ್ರತ್ಯೇಕ ವಿಭಾಗವಿದ್ದು, ಪ್ರಯೋಗಾಲಯ ತಂತ್ರಜ್ಞರಿಗೆ ಅಗತ್ಯ ವೈದ್ಯಕೀಯ ಪರಿಕರಗಳನ್ನು ವ್ಯವಸ್ಥಿತವಾಗಿ ಕಾಯ್ದಿಟ್ಟುಕೊಳ್ಳಲು ಸೌಲಭ್ಯ ಕಲ್ಪಿಸಲಾಗಿದೆ ಎಂದರು.

ಸಾರ್ವಜನಿಕರಿಗೆ ವಾಹನದಲ್ಲಿ ಕುಳಿತುಕೊಳ್ಳುವ ಆಸನದ ವ್ಯವಸ್ಥೆಯಿದೆ. ಹೆಚ್ಐವಿ ಸೇರಿದಂತೆ ಇತರೆ ರೋಗಗಳಿಗೆ ಮತ್ತು ವೈಯಕ್ತವಾಗಿ ಕಂಡು ಬರುವ ಕಾಯಿಲೆಗಳಿಗೆ ಆಪ್ತ ಸಮಲೋಚನೆ ಮೂಲಕ ಧೈರ್ಯ ತುಂಬುವ ಕಾರ್ಯವನ್ನು ಆಪ್ತ ಸಮಾಲೋಚಕರು ಮಾಡುವರು. ಜಿಲ್ಲೆಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶದ ಜನತೆಯು ಇದರ ಸೌಲಭ್ಯ ಪಡೆಯಬೇಕು ಎಂದು ಅವರು ವಿನಂತಿಸಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಯೂ ಆದ ಡಾ.ಇಂದ್ರಾಣಿ ಅವರು ಜಿಲ್ಲೆಯಲ್ಲಿ ಹೆಚ್ಐವಿ ನಿಯಂತ್ರಣ ಚಟುವಟಿಕೆಗಳಿಗೆ ವಾಹನವನ್ನು ಬಳಸುವ ಕುರಿತು ಮಾಹಿತಿ ನೀಡಿದರು.

ಈ ವೇಳೆ ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಅಧ್ಯಕ್ಷ ಮುಂಡರಗಿ ನಾಗರಾಜ, ಪಾಲಿಕೆಯ ಉಪಮೇಯರ್ ಡಿ.ಕುಸುಂ, ಆರೋಗ್ಯ ಶಿಕ್ಷಣ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷೆ ಪದ್ಮ ರೋಜ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ, ಸ್ಥಳೀಯ ಮುಖಂಡರಾದ ವಿವೇಕ್, ಫಯಾಜ್, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ,. ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವಿರೇಂದ್ರ ಕುಮಾರ, ಜಿಲ್ಲಾ ಆರ್ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡ್ಯಾಪ್ಕೋ ಮೇಲ್ವಿಚಾರಕರಾದ ಗಿರೀಶ್ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಜೂನ್ 25 'ಸಂವಿಧಾನ ಹತ್ಯೆ ದಿನ'ವಾಗಿ ಆಚರಣೆ: ಕೇಂದ್ರ ಸರ್ಕಾರ ಘೋಷಣೆ

ನವದೆಹಲಿ: ಕೇಂದ್ರ ಸರ್ಕಾರ ಜೂನ್ 25ನ್ನು ಸಂವಿಧಾನ ಹತ್ಯೆ ದಿನ ಎಂದು ಘೋಷಿಸಿದೆ. ಈ ಸಂಬಂಧ ಕೇಂದ್ರ ಸರ್ಕಾರ ಅಧಿಸೂಚನೆಯನ್ನೂ ಹೊರಡಿಸಿದೆ. ಇಂದಿರಾಗಾಂಧಿ ಪ್ರಧಾನಿಯಾಗಿದ್ದಾಗ 1975ರ ಜೂನ್ 25ರಂದು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದ್ದರು. ಹೀಗಾಗಿ ಆ ದಿನವನ್ನು ಸಂವಿಧಾನ ಹತ್ಯೆ ದಿನವಾಗಿ ಆಚರಣೆ ಮಾಡಲಾಗುವುದು ಎಂದು ಕೇಂದ್ರ ಸರ್ಕಾರ ಹೇಳಿದೆ.



'1975ರ ಜೂನ್ 25ರಂದು ಅಂದಿನ ಪ್ರಧಾನಿ ಇಂದಿರಾಗಾಂಧಿಯವರು ತಮ್ಮ ಸರ್ವಾಧಿಕಾರಿ ಮನಸ್ಥಿತಿಯನ್ನು ಪ್ರದರ್ಶಿಸಿ, ದೇಶದಲ್ಲಿ ತುರ್ತುಪರಿಸ್ಥಿತಿ ಹೇರುವ ಮೂಲಕ ಭಾರತದ ಪ್ರಜಾಪ್ರಭುತ್ವದ ಆತ್ಮವನ್ನೇ ಕತ್ತು ಹಿಸುಕಿದ್ದರು. ಲಕ್ಷಗಟ್ಟಲೆ ಜನರನ್ನು ವಿನಾಕಾರಣ ಜೈಲಿಗೆ ಹಾಕಲಾಯಿತು ಮತ್ತು ಮಾಧ್ಯಮಗಳ ಧ್ವನಿಯನ್ನು ಹತ್ತಿಕ್ಕಲಾಯಿತು. ಭಾರತ ಸರ್ಕಾರವು ಪ್ರತಿ ವರ್ಷ ಜೂನ್ 25 ಅನ್ನು 'ಸಂವಿಧಾನ ಹತ್ಯೆ ದಿನ' ಎಂದು ಆಚರಿಸಲು ನಿರ್ಧರಿಸಿದೆ. 1975ರ ತುರ್ತುಪರಿಸ್ಥಿತಿಯ ಅಮಾನವೀಯ ನೋವನ್ನು ಸಹಿಸಿಕೊಂಡವರೆಲ್ಲರ ಅಪಾರ ಕೊಡುಗೆಯನ್ನು ಈ ದಿನ ನೆನಪಿಸುತ್ತದೆ ಎಂದು ಕೇಂದ್ರ ಸಚಿವ ಅಮಿತ್ ಶಾ ಟ್ವೀಟ್ ಮಾಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೈಗೊಂಡಿರುವ ಈ ನಿರ್ಧಾರದ ಉದ್ದೇಶವು ಸರ್ವಾಧಿಕಾರಿ ಸರ್ಕಾರದ ಅಸಂಖ್ಯಾತ ಚಿತ್ರಹಿಂಸೆ ಮತ್ತು ದಬ್ಬಾಳಿಕೆಯನ್ನು ಎದುರಿಸುತ್ತಿದ್ದರೂ ಪ್ರಜಾಪ್ರಭುತ್ವವನ್ನು ಪುನರುಜ್ಜೀವನಗೊಳಿಸಲು ಹೋರಾಡಿದ ಲಕ್ಷಾಂತರ ಜನರ ಹೋರಾಟವನ್ನು ಗೌರವಿಸುವುದಾಗಿದೆ. 'ಸಂವಿಧಾನ ಹತ್ಯೆ ದಿನ' ಪ್ರಜಾಪ್ರಭುತ್ವವನ್ನು ರಕ್ಷಿಸಲು ಮತ್ತು ಪ್ರತಿಯೊಬ್ಬ ಭಾರತೀಯನೊಳಗೆ ವೈಯಕ್ತಿಕ ಸ್ವಾತಂತ್ರ್ಯದ ಅಮರ ಜ್ವಾಲೆಯನ್ನು ಜೀವಂತವಾಗಿಡಲು ಕೆಲಸ ಮಾಡುತ್ತದೆ, ಇದರಿಂದ ಭವಿಷ್ಯದಲ್ಲಿ ಕಾಂಗ್ರೆಸ್ನಂತಹ ಯಾವುದೇ ಸರ್ವಾಧಿಕಾರಿ ಮನಸ್ಥಿತಿ ಪುನರಾವರ್ತನೆಯಾಗುವುದಿಲ್ಲ ಎಂದು ಹೇಳಿದೆ.

## ಹೊಸ ರೇಷನ್ ಕಾರ್ಡ್ ನಿರೀಕ್ಷೆಯಲ್ಲಿದ್ದವರಿಗೆ ಬಿಗ್‌ಶಾಕ್



ಬೆಂಗಳೂರು: ರಾಜ್ಯ ಸರ್ಕಾರವು ಹೊಸ ರೇಷನ್ ಕಾರ್ಡ್ ಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ ಎಂಬುದರ ಕುರಿತಂತೆ ಆಹಾರ ಇಲಾಖೆ ಸ್ಪಷ್ಟನೆ ನೀಡಿದ್ದು, ಹೊಸ ರೇಷನ್ ಕಾರ್ಡ್ ಗೆ ಅರ್ಜಿ ಆಹ್ವಾನಿಸಲಾಗಿದೆ ಎಂಬುದು ವದಂತಿಯಾಗಿದೆ ಎಂದು ತಿಳಿಸಿದೆ.

ಸಾಮಾಜಿಕ ಜಾಲತಾಣದಲ್ಲಿ ಹೊಸ ರೇಷನ್ ಕಾರ್ಡ್ ಗೆ ಅರ್ಜಿ ಕರೆಯಲಾಗಿದ್ದು, ಇಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ಅವಕಾಶ ನೀಡಲಾಗಿದೆ ಎಂಬ ವದಂತಿ ಹಬ್ಬಿದೆ.


ಆದರೆ ಇದಕ್ಕೆ ಆಹಾರ ಇಲಾಖೆ ಸ್ಪಷ್ಟನೆ ನೀಡಿದ್ದು, ರೇಷನ್ ಕಾರಡ್ಡನಲ್ಲಿ ತಿದ್ದುಪಡಿಗೆ ಮಾತ್ರ ಅವಕಾಶ ನೀಡಲಾಗಿದೆ ಎಂದು ತಿಳಿಸಿದೆ. ಸದ್ಯ ಆರೋಗ್ಯ ಸೌಲಭ್ಯಕ್ಕಾಗಿ ಮಾತ್ರ ಅವಶ್ಯಕತೆ ಇದ್ದವರಿಗೆ ಬಿಪಿಎಲ್ ಕಾರ್ಡ್ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿದ್ದು, ಶೀಘ್ರವೇ ಅನರ್ಹ ಬಿಪಿಎಲ್ ಕಾರ್ಡ್ ಗಳನ್ನು ರದ್ದು ಮಾಡಿ ಅರ್ಹ ಫಲಾನುಭವಿಗಳಿಗೆ ಕಾರ್ಡ್ ವಿತರಿಸಲಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

## ಅನೈತಿಕ ಸಂಬಂಧ: ತಲೆಮೇಲೆ ಕಲ್ಲು ಎತ್ತಿಹಾಕಿ ಬರ್ಬರ ಕೊಲೆ

ಚಿತ್ರದುರ್ಗ: ಅನೈತಿಕ ಸಂಬಂಧ ಹಿನ್ನೆಲೆ ವ್ಯಕ್ತಿಯ ಬರ್ಬರ ಹತ್ಯೆ ನಡೆದಿರುವ ಘಟನೆ ಜಿಲ್ಲೆಯ ಹಿರಿಯೂರು ತಾಲೂಕಿನ ಹುಲಗಲಕುಂಟೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರವಿಕುಮಾರ್ (35) ಕೊಲೆಯಾದ ವ್ಯಕ್ತಿ. ಸುನೀಲ್ ಎಂಬಾತ ಮಲಗಿದ್ದಾಗ ರವಿ ಕುಮಾರ್ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ್ದಾನೆ. ಮಾಹಿತಿಗಳ ಪ್ರಕಾರ ರವಿ ಪತ್ನಿ ಜೊತೆ ಸುನೀಲ್ ಅನೈತಿಕ ಸಂಬಂಧ ಹೊಂದಿದ್ದ ಎನ್ನಲಾಗಿದೆ. ಘಟನೆ ಬಳಿಕ ಆರೋಪಿ ಸುನೀಲ್ನನ್ನು ವಶಕ್ಕೆ ಪಡೆದು ಕೊಂಡಿದ್ದಾರೆ. ಸ್ಥಳಕ್ಕೆ ಪಿಎಸ್ಐ ಕಾಳಿಕೃಷ್ಣ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಹಿರಿಯೂರು ಗ್ರಾಮಾಂತರ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

## ಪ್ರವಾಸಿಗರ ಹುಚ್ಚಾಟ; ಬುದ್ಧಿ ಕಲಿಸಲು ಬಟ್ಟೆ ಹೊತ್ತೊಯ್ದ ಪೊಲೀಸರು



ಚಿಕ್ಕಮಗಳೂರು: ಮೂಡಿಗೆರೆ ತಾಲೂಕಿನ ಚಾರ್ಮಾಡಿ ಘಾಟ್ ಬಳಿಯ ನಿಷೇಧಿತ ಫಾಲ್ಸ್ ಒಂದರ ಬಳಿ ಪ್ರವಾಸಕ್ಕೆ ಬಂದಿದ್ದ ಯುವಕರು ಹುಚ್ಚಾಟ ಮಾಡಿದ್ದು, ಬಣಕಲ್ ಪೊಲೀಸರು ಯುವಕರ ಬಟ್ಟೆ ಹೊತ್ತೊಯ್ದು ಬುದ್ಧಿ ಕಲಿಸಿದ್ದಾರೆ.

## ಆಸ್ತಿ ತೆರಿಗೆ ಪಾವತಿ; ಶೇ.05 ರಷ್ಟು ರಿಯಾಯಿತಿಯ ಅವಧಿ ವಿಸ್ತರಣೆ

ಬಳ್ಳಾರಿ: ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಸ್ತಕ ಆರ್ಥಿಕ ವರ್ಷದ ಪ್ರಾರಂಭದ 30 ದಿನಗಳಲ್ಲಿ ಪೂರ್ಣ ಪ್ರಮಾಣದ ಆಸ್ತಿ ತೆರಿಗೆ ಪಾವತಿ ಮಾಡಿದಲ್ಲಿ ಶೇ.05 ರಷ್ಟು ರಿಯಾಯಿತಿ ನೀಡಲು ಕಲ್ಪಿಸಿರುವ ಅವಧಿಯನ್ನು ಜು.31 ರ ವರೆಗೆ ವಿಸ್ತರಿಸಲಾಗಿದೆ.

ಪಾಲಿಕೆ ವ್ಯಾಪ್ತಿಯ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಪಾಲಿಕೆಯ ಆಯುಕ್ತ ಜಿ.ಖಲೀಲ್ಸಾಬ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಜಿ ಸಚಿವ ನಾಗೇಂದ್ರ ಬಂಧನಕ್ಕೆ ಇಡಿ ನನ್ನ ಅನುಮತಿ ಪಡೆಯಲೇಬೇಕು: ಸ್ಪೀಕರ್ ಯು.ಟಿ.ಖಾದರ್

ಬೆಂಗಳೂರು: 16ನೇ ವಿಧಾನ ಸಭೆಯ ನಾಲ್ಕನೇ ಅಧಿವೇಶನ ಜುಲೈ 15ರಿಂದ 26ವರೆಗೂ ನಡೆಯಲಿದೆ. ಒಟ್ಟು ಒಂಬತ್ತು ದಿನಗಳ ಕಾಲ ಮುಂಗಾರು ಅಧಿವೇಶನ (Monsoon session) ನಡೆಯಲಿದೆ ಎಂದು ಸ್ಪೀಕರ್ ಯು.ಟಿ.ಖಾದರ್ ತಿಳಿಸಿದ್ದಾರೆ.



ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಧಾನ ಸಭೆಯ ಹಿಂಬಾಗಿಲು ಬದಲಿಸುವ ಕೆಲಸ ಮಾಡಿದ್ದೇವೆ. ವಿಧಾನ ಸೌಧದ ಸೌಂದರ್ಯ ಹೆಚ್ಚಿಸಲು ಪ್ಲ್ಯಾನ್ ಮಾಡಿದ್ದೇವೆ. ಸಿಎಂ ಸಿದ್ದರಾಮಯ್ಯ ಅವರು ಜುಲೈ 15ರಂದು ಮುಖ್ಯದ್ವಾರದ ಉದ್ಘಾಟನೆ ಮಾಡಲಿದ್ದಾರೆ ಎಂದು ತಿಳಿಸಿದರು.

ಮೊದಲು ಬಂದವರನ್ನು ಮಾತ್ರ ಗುರುತಿಸುತ್ತೀರಿ ಎಂಬ ಅಪವಾದ ಇತ್ತು. ಈಗ ತಡವಾಗಿ ಹೋದವರನ್ನೂ ಗುರುತಿಸಲು ಸೂಚಿಸಿದ್ದೇನೆ. ದಿನಕ್ಕೆ ವಿಧಾನ ಸಭೆ ಒಳಗೆ ಎಷ್ಟು ಬಾರಿ ಒಳಗೆ ಬಂದರು, ಎಷ್ಟು ಬಾರಿ ಹೊರಗೆ ಹೋದರು ಎಂಬ ಮಾಹಿತಿ ಸಂಗ್ರಹ ಮಾಡುತ್ತೇವೆ. ಜನಪ್ರತಿನಿಧಿಗಳಿಗೆ ಈ ಬಾರಿ ಚೆಸ್ ಗೇಮ್ ಏರ್ಪಾಡು ಮಾಡಿದ್ದೇವೆ. ಇದರಲ್ಲಿ ಶಾಸಕರು ಮತ್ತು ಪರಿಷತ್ ಸದಸ್ಯರು ಭಾಗವಹಿಸಬಹುದು. ಕಾರ್ಯ ದಕ್ಷತೆ ತೋರಿದವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಶೀಘ್ರದಲ್ಲೇ ಕೊಡುತ್ತೇವೆ ಎಂದು ತಿಳಿಸಿದರು.

ಇಡಿ ಅಧಿಕಾರಿಗಳು ಶಾಸಕ ನಾಗೇಂದ್ರ ವಶಕ್ಕೆ ಪಡೆದಿರುವ ಬಗ್ಗೆ ಪ್ರತಿಕ್ರಿಯಿಸಿ, ಬಂಧನದ ಬಗ್ಗೆ ಅಧಿಕಾರಿಗಳು ಇನ್ನೂ ಮಾಹಿತಿ ನೀಡಿಲ್ಲ. ಅಧಿವೇಶನ ನಡೆಯದಿರುವಾಗ ಬಂಧಿಸಿದ ಬಳಿಕ ನಮಗೆ ಮಾಹಿತಿ ಕೊಡಬೇಕು. ಇಲ್ಲಿಯವರೆಗೂ ಮಾಹಿತಿ ಕೊಟ್ಟಿಲ್ಲ. ಮುಂದೆ ಮಾಹಿತಿ ಕೊಡಬಹುದು.

ಸದ್ಯಕ್ಕೆ ನನಗೆ ಮಾಹಿತಿ ಕೊಟ್ಟಿಲ್ಲ. ಮಾಧ್ಯಮಗಳಿಂದ ಮಾಹಿತಿ ಸಿಕ್ಕಿದೆ. ಅಧಿವೇಶನ ನಡೆಯುವಾಗ ಮಾತ್ರ ಶಾಸಕರನ್ನು ಬಂಧಿಸಬೇಕಿದ್ದರೆ ನನ್ನ ಅನುಮತಿ ಬೇಕು. ಈ ಪ್ರಕರಣದಲ್ಲಿ ನನಗೆ ಇಡಿ ಅಧಿಕಾರಿಗಳು ಬಂಧನದ ಬಗ್ಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

**ನಗರಸಭೆ ಕಾರ್ಯಾಲಯ ಗೋಕಾಕ.**
**ಸಂಗೊಳ್ಳಿ ರಾಯಣ್ಣ ವೃತ್ತ ಗೋಕಾಕ–591307 ಜಿಲ್ಲೆ:ಬೆಳಗಾವಿ ರಾಜ್ಯ:ಕರ್ನಾಟಕ ಪೋ.ನಂ:08332–225003**
**WebSite:www.gokakcity.mrc.gov.in E-Mail:ka.gokak.cmc@gmail.com**

ನಂ.ನಸಗೋ/ಆವಿ/ಟೆಂಡರ/2024–25/ ದಿನಾಂಕ: 11–07–2024

**ಟೆಂಡರ ಪ್ರಕಟಣೆ (through karnataka public procurement portal)**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000 ರ ಪ್ರಕಾರ ಸ್ಟ್ಯಾಂಡರ್ಡ ಟೆಂಡರ ಡಾಕ್ಯುಮೆಂಟ್ ನಿಯಮದನ್ವಯ ಈ ಕೆಳಕಂಡ ಬೆಳಗಿನ ಉಪಾಹಾರ ಪೂರೈಸಲು ಹಾಗೂ 220 ಲೀಟರ್ ಸಾಮರ್ಥ್ಯದ ಬಿನ್ಸ್‌ಗಳನ್ನು ಖರೀದಿಸಲು karnataka public procurement portal ಮುಖಾಂತರ ಟೆಂಡರನ್ನು ಅಹ್ವಾನಿಸಲಾಗಿದೆ. ವಿವರ ಈ ಕೆಳಕಂಡಂತಿರುತ್ತದೆ.

| Sl No | Description | Quantity | Put Tender Amount (In Lakhs.) | EMD (in Rs) | Tender No |
|---|---|---|---|---|---|
| 1 | Supply of morning Tiffin to Puorkarmikas and other cleaning workers | 35770 Plates (Yearly) | 12.52 | 31300.00 | DMA/2024-25/ SE3225 |
| 2 | Supply of 220 ltr capacity Bins (Crates) for Dry Waste Collection Centre) | 100 NO'S | 3.96 | 9900.00 | DMA/2023-24/ IND1239/CALL-3 |

1)ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: 26–07–2024 ಸಾಯಂಕಾಲ 05:30 ರ ವರೆಗೆ.
2)ಟೆಂಡರ ತೆರೆಯುವ ದಿನಾಂಕ: 29–07–2024 ಬೆಳಿಗ್ಗೆ 11:00 ಗಂಟೆಗೆ.

ಹೆಚ್ಚಿನ ಮಾಹಿತಿಯನ್ನು ಹಾಗೂ ವಿವರಗಳನ್ನು ಅಂತರ್ಜಾಲದ ವಿಳಾಸ http://kppp.karnataka.gov.in ರಲ್ಲಿ ಪಡೆಯಬಹುದಾಗಿದೆ.

ಸಹಿ/–ಪೌರಾಯುಕ್ತರು,
ನಗರಸಭೆ, ಗೋಕಾಕ.

DIPR/BGM/RO-NO-366/KSMCA/2024-25

Requisition No:322/2024-25 Date:12-Jul-2024

# ಕಳಸಾ–ಬಂಡೂರಿ ಯೋಜನೆ ಜಾರಿಗೆ ಗೋವಾ ಸಿಎಂ ಅಡ್ಡಗಾಲು: ಶಾಸಕ ಕೋನರಡ್ಡಿ

ನವಲಗುಂದ: ಉತ್ತರ ಕರ್ನಾಟಕದ ಪ್ರಮುಖ ಬೇಡಿಕೆ ಮಹದಾಯಿ ಕಳಸಾ–ಬಂಡೂರಿ ಜಾರಿ ಮಾಡಲು ಗೋವಾ ಸರ್ಕಾರ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿ ಪ್ರವಾಹ ಪ್ರಾಧಿಕಾರ ಮೂಲಕ ಯೋಜನೆ ತಡೆಯಲು ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ ಅಡ್ಡಗಾಲು ಹಾಕುತ್ತಿದ್ದಾರೆ ಎಂದು ಮಹದಾಯಿ ಹೋರಾಟಗಾರ ಹಾಗೂ ಶಾಸಕ ಎನ್. ಹೆಚ್. ಕೋನರಡ್ಡಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮಹಾರಾಷ್ಟ್ರ ಸರ್ಕಾರ ಕೇಂದ್ರ ಸರ್ಕಾರದ ಅನುಮತಿ ಪಡೆಯದೆ ಮಹದಾಯಿ ಹತ್ತಿರ ವಿರುವ ವಿಆರ್ಡಿ ಆಣೆಕಟ್ಟು ಎತ್ತರಕ್ಕೆ ರಾಜ್ಯದ ವಿರೋಧವಿದೆ ಎಂದು ಅವರು ಹೇಳಿದರು.

ಗೋವಾ ಸರ್ಕಾರ ಒತ್ತಡದ ಮೆರೆಗೆ ಕೇಂದ್ರ ಸರ್ಕಾರ ರಚಿಸಿರುವ ಕೇಂದ್ರ ಮಹದಾಯಿ ಪ್ರವಾಹ ಪ್ರಾಧಿಕಾರದ ನಿಯೋಗದ ಅಧ್ಯಕ್ಷರು ಹಾಗೂ ಸದಸ್ಯರು ಬಾರಿ ಮಳೆಯಾಗುವ ಸಂದರ್ಭದಲ್ಲಿ ಮಹದಾಯಿ ಅಚ್ಚುಕಟ್ಟು ಪ್ರದೇಶಕ್ಕೆ ಭೇಟಿ ನೀಡಿ ಪರಿವೀಕ್ಷಣೆ ನಡೆಸುವ ಉದ್ದೇಶ ಏನು? ಎಂಬ ವಿಷಯವನ್ನು ರಾಜ್ಯದ ಸಂಸದರು ಗಂಭೀರವಾಗಿ ಪರಿಗಣಿಸಬೇಕು ಎಂದರು.

ಮಹದಾಯಿ ನ್ಯಾಯಧೀಕರಣ ನ್ಯಾಯಮೂರ್ತಿ ಪಾಂಚಾಳ ಅವರು ಅಂತಿಮ ತೀಪು ನೀಡಿ ಕರ್ನಾಟಕಕ್ಕೆ 13.42 ಟಿಎಂಸಿ ನೀರು ಉಪಯೋಗಿಸಲು ಆದೇಶಿಸಿದೆ. ನೀರು ಉಪಯೋಗಿಸಲು ಕಳಸಾ ನಾಲಾ ತಿರುವು ಯೋಜನಯಡಿ 1.72 ಟಿಎಂಸಿ ಹಾಗೂ ಬಂಡೂರ ನಾಲಾ ತಿರುವು ಯೋಜನೆ ಅಡಿ 2.18 ಟಿಎಂಸಿ ಕುಡಿಯುವ ನೀರಿನ (ಲಿಫ್ಟ್ ಯೋಜನೆಗಳು) ಮಾಡಲು ಯಾವದೇ ತೊಂದರೆ ಇಲ್ಲ. ಯೋಜನೆ ಜಾರಿ ಮಾಡಲು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ 27/02/2020 ರಂದು ಗೆಜೆಟ್



ಅಧಿಸೂಚನೆ ಹೊರಡಿಸಿದೆ. ನಂತರ ಡಿಪಿಆರ್ ತಯಾರಿಸಲು 29/12/2022 ರಂದು ಅನುಮತಿ ಸಹ ನೀಡಿದೆ.

ಮಹದಾಯಿ ಕಳಸಾ–ಬಂಡೂರಿ ಯೋಜನೆ ಪ್ರದೇಶದಲ್ಲಿ 26.925 ಹಾಗೂ ಬಂಡೂರ ಯೋಜನೆಗೆ 28.447 ಹೆಕ್ಟೇರ್ ಬೇಕಾಗಿದ್ದ ಅರಣ್ಯ ಭೂಮಿಗೆ ಬದಲಾಗಿ ರಾಜ್ಯ ಸರ್ಕರ ಪರ್ಯಾಯ ಭೂಮಿಯನ್ನು ಅರಣ್ಯ ಇಲಾಖೆಗೆ ನೀಡಿದೆ.

ಗೋವಾ ಕುಂಟು ನೆಪ ನೀಡಿ ಅಲ್ಲಿ ಹುಲಿ ಕಾರಿಡಾರ್ ಇದೆ ಎಂದು ಈ ಯೋಜನೆಯನ್ನು ಮುಂದೂಡಲು ಪ್ರಯತ್ನಿಸುತ್ತಿದೆ. ಅದಕ್ಕೆ ರಾಜ್ಯ ಸರ್ಕಾರ ಅರಣ್ಯ ಪರಿಸರ ಉನ್ನತ ಸಮಿತಿ ಅನುಮೋದನೆ ಪಡೆಯಲು 30/01/2024 ರಂದು 77ನೇ ಎಸ್ ಸಿ–ಎನ್‌ಬಿಡಬ್ಲ್ಯೂಎಲ್ ಸಭೆಯಲ್ಲಿ ಮಂಡಿಸಿದೆ. ಆದರೆ ಕೇಂದ್ರ ಸರ್ಕಾರ ಅನುಮತಿ ನೀಡದೇ ರಾಜ್ಯ ಸರ್ಕಾರ ಸಲ್ಲಿಸಿದ ಪ್ರಸ್ತಾವನೆಯನ್ನು ಮುಂದೂಡಿ ಕಾಲಹರಣ ಮಾಡುವ ಬದಲು ರಾಜ್ಯದ ಹಿತದೃಷ್ಟಿಯಿಂದ ಅನುಮತಿ ನೀಡಬೇಕು ಎಂದರು.

ರಾಜ್ಯದ ನೆಲ ಜಲದ ಪ್ರಶ್ನೆ ಬಂದಾಗ ಹಿಂದಿನಿಂದಲೂ ರಾಜ–ಕೀಯವನ್ನು ಲೆಕ್ಕಕ್ಕೆ ತೆಗೆದುಕೊಳ್ಳದೇ ಒಗ್ಗಟ್ಟಾಗಿ ನಿರ್ಣಯ ತೆಗೆದುಕೊಂಡಿದ್ದು ಈಗ ರಾಜ್ಯದ ಎಲ್ಲಾ ಸಂಸದರು, ಕೇಂದ್ರ ಸಚಿವರು ಒಗ್ಗಟ್ಟಾಗಿ ಈ ಯೋಜನೆ ಜಾರಿಗೆ ಪ್ರಯತ್ನಿಸದಿದ್ದರೆ ಕರ್ನಾಟಕಕ್ಕೆ ಅನ್ಯಾಯವಾಗುತ್ತದೆ. ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನೀರಾವರಿ ಸಚಿವರು ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ಸರ್ಕಾರ ಅನುಮತಿ ನೀಡುವ ನಿರೀಕ್ಷೆಯ ಮೇಲೆ ಕಳಸಾ–ಬಂಡೂರಿ ನಾಲಾ ತಿರುವ ಯೋಜನೆಗಳಿಗೆ (ಲಿಫ್ಟ್ ಯೋಜನೆಗಳು) ಟೆಂಡರ್ ಪ್ರಕ್ರಿಯೆ ಅಂತಿಮಗೊಳಿಸಿ ಕೇಂದ್ರ ಸರ್ಕಾರ ಅರಣ್ಯ ಮತ್ತು ವನ್ಯಜೀವಿ ಪರಿಸರ ಇಲಾಖೆಯಿಂದ ಅನುಮೋದನೆ ಪಡೆದ ತಕ್ಷಣ ಗುತ್ತಿಗೆದಾರರೊಂದಿಗೆ ಒಪ್ಪಂದ ಮಾಡಿಕೊಂಡು ಕಾಮಗಾರಿ ಪ್ರಾರಂಭಿಸಲು ನಿರ್ಧರಿಸಿದ್ದಾರೆ ಎಂದರು.

# ಆನ್ಲೈನ್ ಗೇಮಿಂಗ್ ವ್ಯಾಮೋಹಕ್ಕೆ ಬಲಿಯಾದ ಬಿಇ ವಿದ್ಯಾರ್ಥಿ

ಹುಬ್ಬಳ್ಳಿ: ಆನ್ಲೈನ್ ಗೇಮಿಂಗ್ ವ್ಯಾಮೋಹಕ್ಕೆ ವಿದ್ಯಾರ್ಥಿ ಬಲಿಯಾದ ಘಟನೆ ಹುಬ್ಬಳ್ಳಿಯ ಶಿರಡಿ ನಗರದಲ್ಲಿ ನಡೆದಿದೆ. ವಸತಿ ನಿಲಯದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ರಾಕೇಶ್ ಶ್ರೀಶೈಲ್ ಜಂಬಲದಿನ್ನಿ(21) ಮೃತ ವಿದ್ಯಾರ್ಥಿ. ಈತ ಬಿವಿಬಿ ಕಾಲೇಜಿನಲ್ಲಿ ಬಿಇ 6ನೇ ಸೆಮಿಸ್ಟರ್ ನಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ. ಶಿರಡಿ ನಗರದಲ್ಲಿರುವ ವಸತಿ ನಿಲಯದಲ್ಲಿ ವಾಸವಿದ್ದ.


ರಾಕೇಶ್ ಶ್ರೀಶೈಲ್ ತಾನು ವಾಸಿಸುತ್ತಿದ್ದ ಕೋಣೆಯಲ್ಲಿ ನೇಣಿಗೆ ಶರಣಾಗಿದ್ದಾನೆ. ಫ್ಯಾನ್ ಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ರಾಕೇಶ್ ನಿತ್ಯ ಆನ್ಲೈನ್ ಗೇಮ್ ಆಡುತ್ತಿದ್ದನು



ಎಂದು ಹೇಳಲಾಗುತ್ತಿದೆ. ಹೀಗಾಗಿ ಆನ್ ಲೈನ್ ಗೇಮ್ನಲ್ಲಿ ಹಣವನ್ನು ಕಳೆದುಕೊಂಡಿದ್ದನು ಎನ್ನಲಾಗುತ್ತಿದೆ. ಇದರಿಂದ ಮನನೊಂದು ಆತ್ಮಹತ್ಯೆಗೆ ಶರಣಾಗಿದ್ದಾನೆ ಎನ್ನಲಾಗುತ್ತಿದೆ. ರಾಕೇಶ್ ಶ್ರೀಶೈಲ್ ಜಂಬಲದಿನ್ನಿ ಸಾವಿನ ಹಿನ್ನೆಲೆ ಪೊಲೀಸ್ ಆಯುಕ್ತ ಶಶಿಕುಮಾರ್ ವಸತಿ ನಿಲಯಕ್ಕೆ ಭೇಟಿ ನೀಡಿದ್ದಾರೆ. ಆತ್ಮಹತ್ಯೆ ಮಾಡಿಕೊಂಡ ಕೋಣೆಯ ಪರಿಶೀಲನೆ ಮಾಡಿದ್ದಾರೆ. ಆತ್ಮಹತ್ಯೆ ವಿಷಯ ಗಮನಕ್ಕೆ ಬರುತ್ತಿದ್ದಂತೆಯೇ ಸಿಬ್ಬಂದಿ ಆತನನ್ನು ಆಸ್ಪತ್ರೆಗೆ ಸಾಗಿಸಿದ್ದಾರೆ. ಆದ–'ರೆ ಆಸ್ಪತ್ರೆ ಮುಟ್ಟುವುದರೊಳಗಾಗಿ ಆತ ಮೃತಪಟ್ಟಿದ್ದನು. ಸದ್ಯ ಈ ಪ್ರಕರಣದ ಕುರಿತು ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.

# ಮುಡಾ ತನಿಖೆಯನ್ನು ಸಿಎಂ ಅವರಿಗೆ ತಳಕು ಹಾಕುವ ಪ್ರಶ್ನೆ ಇಲ್ಲ: ನಾಗರಾಜ್ ಯಾದವ್

ಬೆಳಗಾವಿ: "ನಾನು ಹಿಂದೆಯೂ ಕೂಡ ವಿವಿಧ ಇಲಾಖೆಯಲ್ಲಿ ಕೆಲಸ ಮಾಡಿದ್ದೆವೆ. ಆಯಾ ಇಲಾಖೆ ಮುಖ್ಯಾಧಿಕಾ–ರಿಗಳು ಜವಾಬ್ದಾರಿ ಇರುತ್ತಾರೆ, ಮುಡಾ ತನಿಖೆಯನ್ನು ಸಿಎಂ ಅವರಿಗೆ ತಳಕು ಹಾಕುವ ಪ್ರಶ್ನೆ ಇಲ್ಲ, ಸಿಎಂ ಅವರಿಗೂ ಇದನ್ನು ಸಂಬಂಧವಿಲ್ಲ , ಇದು ರಾಜ–ಕೀಯ ಪ್ರೇರಿತ ಎಂದು ವಿಧಾನ ಪರಿಷತ್ ಸದಸ್ಯ, ಕೆಪಿಸಿಸಿ ವಕ್ತಾರರಾದ ನಾಗರಾಜ್ ಯಾದವ್ ಬಿಜೆಪಿಯವರಿಗೆ ಚಾಟಿ ಬೀಸಿದರು.



ಇಲ್ಲಿನ ಸುವರ್ಣಸೌಧದಲ್ಲಿ ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ಭ್ರಷ್ಟಾಚಾರ ತನಿಖೆಗಳು ನಡೆಯಬೇಕಾದರೆ ಪಾರದರ್ಶಕವಾಗಿ ನಡೆಯಬೇಕಿದೆ. ಭ್ರಷ್ಟಾಚಾರ ನಿರ್ಮೂಲನೆ ಮಾಡುವಗೋಸ್ಕರ ಯಾವುದೇ ತನಿಖೆ ನಡೆದರೂ ಎಲ್ಲಾ ರೀತಿ ಸಹಕಾರ ನೀಡುವುದಾಗಿ ಸಿಎಂ ಸಿದ್ದರಾಮಯ್ಯನವರು ಹೇಳಿದ್ದಾರೆ. ಯಾರೇ ತಪ್ಪು ಮಾಡಿದರು ಕಾನೂನಿನ ಪ್ರಕಾರ ಶಿಕ್ಷೆ ಒಳಗಾಗಲೇಬೇಕು ಇದು ಕಾನೂನಿನಲ್ಲಿದೆ " ಎಂದು ನಾಗರಾಜ್ ಯಾದವ್ ಹೇಳಿದರು.

ವಾಲ್ಮೀಕಿ ಪ್ರಕರಣದ ಸಂಬಂಧಿಸಿದಂತೆ ಮಾಜಿ ಸಚಿವ ನಾಗೇಂದ್ರ ಕರೆತಂದು ವಿಚಾರಣೆ ಮಾಡಲಾಗುತ್ತಿದೆ. ಅವರು ಸತ್ಯಾಸತ್ಯತೆಯನ್ನು ಪ್ರತಿಪಾದನೆ ಮಾಡಬೇಕಾಗುತ್ತದೆ. ಇದು ರಾಜಕೀಯ ಪ್ರೇ–ರಿತವಾಗಿ ಇರಬಾರದು, ಪಾರದರ್ಶಕವಾಗಿ ತನಿಖೆ ನಡೆಯಲಿದೆ ಎಂದು ಹೇಳಿದರು.

ಬಿಜೆಪಿ ಅಧಿಕಾರ ಅವಧಿಯಲ್ಲಿ ಭೋವಿ ನಿಗಮದಲ್ಲಿ 97 ಕೋಟಿ ರೂ. ಹಗರಣ ನಡೆದಿದೆ ಎಂಬುವುದು ಆಗಿನ ಶಾಸಕರು ಆರೋಪವಿದೆ. ಅದು ಕೂಡ ಸಿಐಡಿ ತನಿಖೆ ನಡೆಯುತ್ತಿದ್ದು , ಇದನ್ನು ಕೇಳಲು ಬಿಜೆಪಿಯವರಿಗೆ ಯಾವುದೇ ನೈತಿಕತೆ ಇಲ್ಲ ಎಂದು ಕಿಡಿಕಾರಿದರು.



# ತಹಶೀಲ್ದಾರ್ ಮನೆ ಮೇಲೆ ಲೋಕಾ ದಾಳಿ

ರಾಮನಗರ: ಆದಾಯಕ್ಕಿಂತ ಹೆಚ್ಚು ಅಸ್ತಿಗಳಿಕೆ ಆರೋಪದ ಮೇಲೆ ಹಾರೋಹಳ್ಳಿಯ ತಹಶೀಲ್ದಾರ್ ವಿಜಿಯಣ್ಣ ಮನೆ ಮತ್ತು ಕಚೇರಿ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ.

ಕೋಲಾರ ಲೋಕಾಯುಕ್ತ ಎಸ್ಪಿ ನೇತೃತ್ವದಲ್ಲಿ 12 ಜನ ಅಧಿಕಾರಿಗಳ ತಂಡ ವಿಜಿಯಣ್ಣ ನಿವಾಸ ಹಾಗೂ ಕಚೇರಿಯಲ್ಲಿ ಶೋಧಕಾರ್ಯ ನಡೆಸುತ್ತಿದ್ದಾರೆ.

ಮೂಲತಃ ತುಮಕೂರು ಜಿಲ್ಲೆಯ ಅವರು ಮಂಡ್ಯದ ಮಳವಳ್ಳಿ, ಕೋಲಾರ, ಚಿಕ್ಕಬಳ್ಳಾಪುರದಲ್ಲಿ ತಹಶೀಲ್ದಾರ್ ಆಗಿ ಕಾರ್ಯನಿರ್ವಹಿಸಿ ಕಳೆದ ಎರಡು ವರ್ಷಗಳಿಂದ ಹಾರೋಹಳ್ಳಿ ತಹಶೀಲ್ದಾರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಅವರ ಮೇಲೆ ಆದಾಯಕ್ಕಿಂತ ಹೆಚ್ಚು ಆಸ್ತಿಯನ್ನು ಹೊಂದಿರುವ ಆರೋಪ ಕೇಳಿಬಂದಿದ್ದು, ಇದೀಗ ಲೋಕಾಯುಕ್ತ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ. ಹಾರೋಹಳ್ಳಿ ಸೇರಿ 6ಕಡೆಗಳಲ್ಲಿ ಏಕಕಾಲಕ್ಕೆ ದಾಳಿ ಮಾಡಿರುವ ಅಧಿಕಾರಿಗಳು ಪರಿಶೀಲನೆ ಮುಂದುವರೆಸಿದ್ದಾರೆ.

# ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಚಾಲನೆ



ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ನ್ಯೂ ವೈಭವ್ ನಗರದ ನೂತನ ರಸ್ತೆ ನಿರ್ಮಾಣದ ಕಾಮಗಾರಿಗಳಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗುರುವಾರ ಭೂಮಿ ಪೂಜೆಯನ್ನು ನೆರವೇರಿಸಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷೆ ಶ್ರೀಮತಿ ಕೌಸರ್ ಜಹಾನ್ ಸೈಯದ್, ಸದಸ್ಯರಾದ ಫಕೀರವ್ವ ಬೆಳಗಾವಿ, ಸುವರ್ಣ ಲಕ್ಕಣ್ಣವರ, ಅರ್ಚನಾ ಪಠಾಣಿ, ಅಯೂಬ್ ಖಾನ್ ಪಠಾಣ, ಬಂಡೆ ನವಾಜ್ ಸೈಯದ್, ಷರೀಫ್ ಸನದಿ, ರಂಜಾನ್ ಮನಿಯಾರ ಮುಂತಾದವರು ಉಪಸ್ಥಿತರಿದ್ದರು.

ನಂತರ, ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಂಗ್ರಾಳಿ ಕೆ.ಎಚ್ ಗ್ರಾಮದ ರಜಾಕ್ ಕಾಲೋನಿಯ ರಸ್ತೆ ನಿರ್ಮಾಣದ ಕಾಮಗಾರಿಗಳಿಗೆ ಸ್ಥಳೀಯ ನಿವಾಸಿಗಳ ಸಮ್ಮುಖದಲ್ಲಿ ಭೂಮಿ ಪೂಜೆ ಕೈಗೊಂಡು ಕಾಮಗಾ–ರಿಗಳಿಗೆ ಸಚಿವರು ಚಾಲನೆ ನೀಡಿದರು.

ಈ ಸಮಯದಲ್ಲಿ ಖತಾಲ್ ಮುಜಾವರ್, ಯೂನುಸ್ ಕಾಕತಿ, ಖಲೀಂ ಮುಲ್ಲಾ ಹಾಗೂ ಜಮಾತ್ ನ ಎಲ್ಲ ಪದಾಧಿಕಾರಿಗಳು ಉಪಸ್ಥಿತ–ರಿದ್ದರು.

# ಹಟ್ಟಿ ಚಿನ್ನದ ಗಣಿಯಲ್ಲಿ ಭೂ ಕುಸಿತ; ಓರ್ವ ಕಾರ್ಮಿಕ ಸಾವು, ನಾಲ್ವರಿಗೆ ಗಾಯ

ರಾಯಚೂರು: ಲಿಂಗಸುಗೂರು ತಾಲೂಕಿನ ಹಟ್ಟಿ ಚಿನ್ನದ ಗಣಿಯಲ್ಲಿ ಮಣ್ಣು ಕುಸಿದು ಓರ್ವ ಕಾರ್ಮಿಕ ಮೃತಪಟ್ಟು, ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಶುಕ್ರವಾರ ನಡೆದಿದೆ.




ಹಟ್ಟಿ ಚಿನ್ನದ ಗಣಿಯ ಮಲ್ಲಪ್ಪ ಶಾಫ್ಟ್ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕ ಮೌನೇಶ್ (48) ಮೃತಪಟ್ಟಿದ್ದಾರೆ. ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ನಾಲ್ವರನ್ನು ಕಂಪನಿಯ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಗುರುವಾರ ರಾತ್ರಿ ಪಾಳಿಯಲ್ಲಿ ಕಾರ್ಮಿಕರು ಕೆಲಸಕ್ಕೆ ತೆರಳಿದ್ದರು. ಭೂಮಿಯ ಕೆಳಮ್ಮೆ ವಿಭಾಗದಲ್ಲಿ ಕಾರ್ಯ ನಿರ್ವಹಿಸುವಾಗ ಭೂಕುಸಿತವಾಗಿ ಈ ದುರ್ಘಟನೆ ಸಂಭವಿಸಿದೆ. ಚಿನ್ನ ತೆಗೆಯುವ ಮುನ್ನ ಕೆಳಮ್ಮೆ ನಲ್ಲಿ ನಿರಂತರ ಬ್ಲಾಸ್ಟ್ ಮಾಡುವ ವೇಳೆ ಇಂತಹ ದುರ್ಘಟನೆಗಳು ಸಂಭವಿಸುತ್ತವೆ. ಆದರೂ ಕಂಪನಿ ಕಾರ್ಮಿಕರಿಗೆ ರಕ್ಷಣೆ ನೀಡದೇ ಜೀವದ ಜೊತೆ ಚೆಲ್ಲಾಟವಾಡುತ್ತಿದೆ.

ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

# ವಸತಿ ಶಾಲಾ ಶಿಕ್ಷಕನ ಕುಟುಂಬದ ಕಿರುಕುಳಕ್ಕೆ ಬೇಸತ್ತು ವಿದ್ಯಾರ್ಥಿನಿ ಆತ್ಮಹತ್ಯೆ

ಹಾವೇರಿ: ವಸತಿ ಶಾಲಾ ಶಿಕ್ಷಕನ ಕುಟುಂಬದ ಕಿರುಕುಳಕ್ಕೆ ವಿದ್ಯಾರ್ಥಿನಿ ಮನನೊಂದು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಹಾವೇರಿ ಜಿಲ್ಲೆಯ ಹಿರೇಕೇರೂರು ತಾಲೂಕಿನ ಆಲದಕಟ್ಟಿ ಗ್ರಾಮದಲ್ಲಿ ನಡೆದಿದೆ.

ಹೌದು ಡೆತ್ ನೋಟ್ ಬರೆದಿಟ್ಟು ವಿದ್ಯಾರ್ಥಿನಿ ಅರ್ಚನಾ ಗೌಡನವರ್ (16) ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಮೃತ ಅರ್ಚನಾ ಹಿರೇಕೆರೂರು ತಾಲೂಕಿನ ದೂದಿಹಳ್ಳಿಯ ಮೊರಾರ್ಜಿ ವಸತಿ ಶಾಲೆಯಲ್ಲಿ ಓದುತ್ತಿದ್ದ ಅರ್ಚನಾ, ಶಿಕ್ಷಕ ಆರಿಫ್ ಉಲ್ಲಾ ಪುತ್ರಿ ಝೋಯಾ ಮತ್ತು ಅರ್ಚನಾ ಒಂದೇ ತರಗತಿಯಲ್ಲಿ ಓದುತ್ತಿದ್ದರು. ತರಗತಿಯಲ್ಲಿ ಶಿಕ್ಷಕನ ಪುತ್ರಿಗಿಂತಲೂ ಅರ್ಚನಾ ಓದಿನಲ್ಲಿ ಮುಂದಿದ್ದಳು.



ಮಗಳಿಗಿಂತ ಅರ್ಚನಾ ಬುದ್ಧಿವಂತೆಯಾಗಿದ್ದಕ್ಕೆ ಮನೆಗೆ ಕರೆಸಿ, ಕಿರುಕುಳ ನೀಡಿದ್ದಾರೆ. ಶಿಕ್ಷಕನ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆಗೆ ವಿದ್ಯಾರ್ಥಿನಿ ಅರ್ಚನಾ ಶರಣಾಗಿದ್ದಾಳೆ ಎಂದು ತಿಳಿದುಬಂದಿದೆ. ಒಂದು ವಾರದ ಹಿಂದೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ತಿಳಿದುಬಂದಿದೆ.

ಅಂತ್ಯಕ್ರಿಯೆ ಮಾಡಿ ಅರ್ಚನಾ ಕುಟುಂಬ ಸದಸ್ಯರು ಸುಮ್ಮನಾಗಿದ್ದಾರೆ. ಸದ್ಯ ವಿದ್ಯಾರ್ಥಿನೀ ಮೃತ ದೇಹ ಮರಣೋತ್ತರ ಪರೀಕ್ಷೆ ಆಗಿರಲಿಲ್ಲ.

ಹೀಗಾಗಿ ಮರುದಿನ ಹೊರತೆಗೆದು ಸ್ಥಳದಲ್ಲೇ ಮರಣೋತ್ತರ ಪರೀಕ್ಷೆ ನಡೆಸಲಾಯಿತು. ಅಧಿಕಾರಿಗಳ ಸಮ್ಮುಖದಲ್ಲಿ ಸಿಬ್ಬಂದಿಗಳು ಮೃದೇವವನ್ನು ಹೊರತೆಗೆದಿದ್ದಾರೆ. ಸ್ಥಳದಲ್ಲಿರುವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು, ವಿಧಿ ವಿಜ್ಞಾನ ತಜ್ಞರು ಮೃತ ವಿದ್ಯಾರ್ಥಿನಿ ಅರ್ಚನಾ ಸಂಬಂಧಿಕರು ಇದ್ದಾರೆ.

# ಅಕ್ರಮ ಸಂಬಂಧಕ್ಕೆ ಅಡ್ಡಿಯಾದ ಪತಿಯನ್ನು ಕೊಲೆಗೈದ ಪಾಪಿ ಪ್ರಿಯಕರ

ಚಿತ್ರದುರ್ಗ: ಅನೈತಿ–ಕ ಸಂಬಂಧ ಹಿನ್ನೆಲೆ ವ್ಯಕ್ತಿಯ ಬರ್ಬರ ಹತ್ಯೆ ನಡೆದಿರುವ ಘಟನೆ ಜಿಲ್ಲೆಯ ಹಿರಿಯೂರು ತಾಲೂಕಿನ ಹುಲಗಲಕುಂಟೆ ಗ್ರಾಮದಲ್ಲಿ ನಡೆದಿದೆ.




ಗ್ರಾಮದ ರವಿಕುಮಾರ್ (35) ಕೊಲೆಯಾದ ವ್ಯಕ್ತಿ. ಸುನೀಲ್ ಎಂಬಾತ ಮಲಗಿದ್ದಾಗ ರವಿ ಕುಮಾರ್ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ್ದಾನೆ.

ಮಾಹಿತಿಗಳ ಪ್ರಕಾರ ರವಿ ಪತ್ನಿ ಜೊತೆ ಸುನೀಲ್ ಅನೈತಿ–ಕ ಸಂಬಂಧ ಹೊಂದಿದ್ದ ಎನ್ನಲಾಗಿದೆ. ಘಟನೆ ಬಳಿಕ ಆರೋಪಿ ಸುನೀಲ್ನನ್ನು ವಶಕ್ಕೆ ಪಡೆದು ಕೊಂಡಿದ್ದಾರೆ. ಸ್ಥಳಕ್ಕೆ ಪಿಎಸ್ಐ ಕಾಳಿಕೃಷ್ಣ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಹಿರಿಯೂರು ಗ್ರಾಮಾಂತರ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

# ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆ

ಮೊದಲನೇ ಪುಟದಿಂದ}

ಈ ಸಂಬಂಧ ಸ್ಥಳೀಯ ಶಾಸಕರ ಜೊತೆಗೆ ನಿರಂತರ ಸಮನ್ವಯ ಸಾಧಿಸುವ ಮೂಲಕ ಆದಷ್ಟು ಶೀಘ್ರವೇ ಪೂರ್ಣಗೊಳಿಸಬೇಕು. ಈ ಕುರಿತು ರಾಯಬಾಗದಲ್ಲಿ ಶೀಘ್ರವೆ ಸಭೆ ಜರುಗಿಸಲಾಗುವದು.

ನೆರೆಯ ಮಹರಾಷ್ಟ್ರದಲ್ಲಿ ಮಳೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯ ನದಿ ಪಾತ್ರದ ಗ್ರಾಮಗಳಲ್ಲಿ ಎದುರಾಗಬಹುದಾದ ಸಂಭವನೀಯ ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಈ ಕುರಿತು ಸಾರ್ವಜನಿಕರಲ್ಲಿ ಮುಂಜಾಗೃತಾ ಕ್ರಮವಾಗಿ ಅರಿವು ಮೂಡಿಸಬೇಕು ಎಂದು ಸಚಿವರಾದ ಸತೀಶ್ ಜಾರಕಿಹೊಳಿ ಅವರು ಸೂಚನೆ ನೀಡಿದರು.

ಕರ್ನಾಟಕ ಸರಕಾರದ ದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ್ ಹುಕ್ಕೇರಿ ಅವರು ಮಾತನಾಡಿ ಅಗ್ನಿಶಾಮಕ ದಳದ ಸಹಯೋಗದೊಂದಿಗೆ ನಗರ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಚರಂಡಿಗಳನ್ನು ಸ್ವಚ್ಚಗೊಳಿಸುವದರ ಮೂಲಕ ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಿಸುವ ಪ್ರಯೋಗ ಮಾಡುವಂತೆ ಸಭೆಗೆ ಮಾಹಿತಿ ನೀಡಿದರು.

ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ 2022–23 ನೇ ಸಾಲಿನಲ್ಲಿ ಡೆಸಕ್ ಖರೀದಿಗೆ ಟೆಂಡರ ಕರೆಯಲಾಗಿದ್ದರೂ ಸಹ ಇದುವರೆ ಡೆಸ್ಕ್ ಪೂರೈಕೆ ಆಗದಿರುವ ಕುರಿತು ಸಭೆಯ ಗಮನಕ್ಕೆ ತಂದು ಟೆಂಡರ್ ಷರತ್ತುಗಳ ಅನುಸಾರ ಕಾಲಮಿತಿಯಲ್ಲಿ ಡೆಸ್ಕ್ ಪೂರೈಸಬೇಕು ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಚಿಕ್ಕೋಡಿಯ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಲಿಫ್ಟ್ ಇಲ್ಲ ಎಂಬ ನೆಪ ಹೇಳಿ ಆಸ್ಪತ್ರೆ ಲೋಕಾರ್ಪಣೆ ಮಾಡದಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಆಗಸ್ಟ್ 15 ರಂದು ಚಿಕ್ಕೋಡಿಯ ತಾಯಿ ಮಕ್ಕಳ ಆಸ್ಪತ್ರೆಯ ಉದ್ಘಾಟನೆ ಮಾಡಲು ಸಿದ್ಧತೆ ಮಾಡಿಕೊಳ್ಳುವಂತೆ ತಿಳಿಸಿದರು.

ವಾಯವ್ಯ ಸಾರಿಗೆ ಸಂಸ್ಥೆಯ ಅಧ್ಯಕ್ಷರಾದ ಭರಮಗೌಡ(ರಾಜು) ಕಾಗೆ ಅವರು ಮಾತನಾಡಿ, ಜಿಲ್ಲೆಯಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕೇವಲ ಮೇಲ್ದರ್ಜೆಗೆ ಎರಿಸುವುದರಿಂದ ಪ್ರಯೋಜನೆ ಆಗುವುದಿಲ್ಲ. ಮೇಲ್ದರ್ಜೆಗೆ ಎರಿಸುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅಗತ್ಯದ ವೈದ್ಯರ ಹಾಗೂ ಸಿಬ್ಬಂದಿಗಳ ನಿಯೋಜನೆ ಮಾಡುವಂತಹ ಕಾರ್ಯವಾಗಬೇಕು ಎಂದು ಸಭೆಯ ಗಮನಕ್ಕೆ ತಂದರು.

ಕೆಲ ಶಾಲಾ ಶಿಕ್ಷಕರು ದಿನನಿತ್ಯ ಶಾಲೆಗೆ ಮಧ್ಯಪಾನ ಮಾಡಿ ಬರುತ್ತಿರುವ ಕುರಿತು ದೂರುಗಳು ಬಂದಿದ್ದು ಇಂತಹ ಶಿಕ್ಷಕರ ಮೇಲೆ ಕೂಡಲೇ ಕ್ರಮ ಜರುಗಿಸಬೇಕು. ಶಿಕ್ಷಕರ ಕೊರತೆಯಿಂದ ಶಿಕ್ಷಣದ ಗುಣಮಟ್ಟದ ಮೇಲೆ ಪರಿಣಾಮ ಬೀರುತ್ತಿರುವುದರಿಂದ ಶಿಕ್ಷಕರ ನೇಮಕಾತಿ ಪ್ರಸ್ತಾವವನ್ನು ಸಲ್ಲಿಸುವುದರ ಜತೆಗೆ ಶಿಕ್ಷಕರ ನೇಮಕಾತಿಗೆ ಸರಕಾರದ ಮೇಲೆ ಒತ್ತಡ ಹೇರಬೇಕಿದೆ.

ಜಲಜೀವನ ಮಿಷನ ಯೋಜನೆಯಡಿ



ಕಾಮಗಾರಿಗಳು ಅಪೂರ್ಣಗೊಂಡಿದ್ದು, ಈ ಯೋಜನೆಗಡಿ ಇನ್ನೂ ಕೆಲ ಗ್ರಾಮಗಳಲ್ಲಿ ನೀರು ಪೂರೈಕೆ ಆಗದಿರುವ ಕುರಿತು ಅಸಮಾಧಾನ ವ್ಯಕ್ತಪಡಿಸಿ ಈ ಕುರಿತು ಪರೀಶಿಲಿಸಿವಂತೆ ಶಾಸಕ ಕಾಗೆ ಹೇಳಿದರು.

ರಾಜ್ಯಸಭಾ ಸದಸ್ಯರಾದ ಈರಣ್ಣ ಕಡಾಡಿ, ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿರುವ ಬಗ್ಗೆ ವರದಿಗಳು ಪ್ರಕಟವಾಗಿದ್ದು, ಸಮರ್ಪಕ ಪರಿಹಾರ ವಿತರಣೆ ಮಾಡಬೇಕು ಎಂದರು. ರೈತರು ತಮ್ಮ ಜಮೀನುಗಳಲ್ಲಿ ಗಾಣದಮನೆ, ಗೊಡೌನ್ ಮತ್ತಿತರ ಮೂಲಸೌಕರ್ಯ ಮಾಡಿಕೊಳ್ಳಬೇಕಾದರೆ ಬ್ಯಾಂಕ್ ಸಾಲಸೌಲಭ್ಯ ಒದಗಿಸಲು ಎನ್.ಎ. ಮಾಡುವುದು ಅಗತ್ಯವಿದೆ ಎಂದು ಬ್ಯಾಂಕುಗಳು ಸೌಲಭ್ಯ ವಿತರಣೆ ಮಾಡುತ್ತಿಲ್ಲ ಎಂದು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಪರಿಶೀಲಿಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಜಿಪಂ ಸಿಇಓ ತಿಳಿಸಿದರು.

ಆಸಿಫ್(ರಾಜು) ಸೇಠ್, ಬಿಮ್ಸ್ ನಲ್ಲಿ ವೈದ್ಯರು, ಶುಶ್ರೂಷಕಿಯರು ಹಾಗೂ ತಾಂತ್ರಿಕ ಸಿಬ್ಬಂದಿ ಕೊರತೆ ನೀಗಿಸಬೇಕು ಎಂದು ಒತ್ತಾಯಿಸಿದರು.

ವಿಧಾನ ಪರಿಷತ್ ಸದಸ್ಯ ನಾಗರಾಜ್ ಯಾದವ್ ಅವರು, ಮಾತನಾಡಿ, ಬಿಮ್ಸ್ ಹಾಸಿಗೆ ಪ್ರಮಾಣವನ್ನು ಹೆಚ್ಚಿಸುವುದರ ಜತೆಗೆ ಅಗತ್ಯ ವೈದ್ಯಕೀಯ ಸಿಬ್ಬಂದಿ ಮತ್ತು ತಾಂತ್ರಿಕ ಸಿಬ್ಬಂದಿ ನೇಮಕಕ್ಕೆ ಕ್ರಮ ವಹಿಸಬೇಕು ಎಂದು ಹೇಳಿದರು.

ಜಿಲ್ಲೆಯ ಜನಸಂಖ್ಯೆಗೆ ಅನುಗುಣವಾಗಿ ಚಿಕ್ಕೋಡಿಗೆ ಮತ್ತೊಂದು ಜಿಲ್ಲಾ ಆಸ್ಪತ್ರೆ ಸ್ಥಾಪಿಸಬೇಕು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಹಾಸಿಗೆ ಪ್ರಮಾಣವನ್ನು ಹೆಚ್ಚಿಸಬೇಕು ಎಂದು ಯಾದವ ಒತ್ತಾಯಿಸಿದರು.

ಜಿಲ್ಲಾಧಿಕಾರಿ ಮೊಹಮ್ಮದ ರೋಷನ್ ಮಾತನಾಡಿ ಡೆಂಗ್ಯೂ ನಿಯಂತ್ರಣಕ್ಕೆ ಹೆಚ್ಚಿನ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ.

ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆ ಹಾಗೂ ಗ್ರಾಮ ಪಂಚಾತಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವದರ ಮೂಲಕ ಸ್ವಚ್ಚತೆಗೆ ಕ್ರಮವಹಿಸುವಂತೆ ಸೂಚಿಸಲಾಗಿದೆ. ಕಳೆದಮೂರು ದಿನಗಳಲ್ಲಿ 350 ಪರೀಕ್ಷೆಗಳು ಜರುಗಿದ್ದು ಇದರಲ್ಲಿ 3 ಪ್ರಕರಣಗಳು ಧೃಡಪಟ್ಟಿರುತ್ತವೆ ಎಂದು ತಿಳಿಸಿದರು.

ಸಂಭವನೀಯ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಜಿಕ್ಕಾಡಳಿತ ಸಜ್ಜಾಗಿದ್ದು ಈ ನಿಟ್ಟಿನಲ್ಲಿ ಅಗತ್ಯದ ರಕ್ಷಣಾ ಪರಿಕರಗಳ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಇದರ ಜೊತೆಗೆ ಕಾಳಜಿ ಕೇಂದ್ರಗಳಲ್ಲಿನ ಮೂಲಭೂತ ಸೌಲಭ್ಯಗಳ ಕುರಿತು ಪರಿಶೀಲಿಸಿ ವರದಿ ನೀಡುವಂತೆ ಸಂಭಂದಿಸಿದ ಅಧಿಕಾರಿಗಳುಗೆ ಸೂಚುಸಲಾಗಿದೆ ಎಂದು ತಿಳಿಸಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಕೆಡಿಪಿ ಸಭೆಯನ್ನು ನಿರ್ವಹಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯರ ಕೊರತೆಯನ್ನು ನೀಗಿಸಲು ಅನುಕೂಲವಾಗುವಂತೆ ಎ.ಬಿ.ಸಿ. ಕೆಟಗ–ರಿಗಳನ್ನು ಸೃಷ್ಟಿಸಿ ಆಯಾ ಕೆಟಗರಿ ಅನುಸಾರ ವೈದ್ಯರನ್ನು ಪಿಎಚ್ ಸಿ ಹಾಗೂ ಸಿಎಚ್ ಸಿ ಗಳಿಗೆ ನಿಯೋಜಿಸಬಹುದು ಎಂಬ ವಿಷಯವನ್ನು ಸರಕಾರದ ಗಮನಕ್ಕೆ ತರಲಾಗಿದೆ ಎಂದರು.

ಶಾಲೆಗಳಲ್ಲಿ ಆಶಿಸ್ತು ತೋರುವಂತಹ ಶಿಕ್ಷಕರ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವದು. ಅಲ್ಲದೇ ಪ್ರತಿ ತಿಂಗಳ ಮೂರನೇ ಶನಿವಾರದಂದು ಎಲ್ಲ ಶಾಲೆಗಳಲ್ಲಿ ಪಾಲಕರ ಸಭೆಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಾತನಾಡಿ ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣಕ್ಕೆ ಕ್ರಮವಹಿಸಲಾಗುತ್ತಿದೆ. ಪ್ರಸ್ತುತ ಜಿಲ್ಲೆಯಲ್ಲಿ 209 ಪ್ರಕರಣಗಳು ಬೆಳಕಿಗೆ ಬಂದಿರುತ್ತವೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜಿಸುವದರ ಮೂಲಕ ಹೆಚ್ಚಿನ ಪರೀಕ್ಷೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ನಗರ ಪೊಲಿಸ್ ಆಯುಕ್ತ ಯಡಾ ಮಾರ್ಟಿನ ಮಾರ್ನಬ್ಯಾಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ, ವಿಧಾನ ಸಭಾ, ವಿಧಾನ ಪರಿಷತ ಸದಸ್ಯರುಗಳು, ನಾಮ ನಿರ್ದೇಶನ ಸದಸ್ಯರುಗಳು, ವಿವಿಧ ಇಲಾಖೆಗಳ ಅಧಿಕಾ–ರಿಗಳು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಗ್ರಾಮೀಣ ಪ್ರದೇಶದಲ್ಲಿ 500 ಮಹಿಳಾ ಸ್ವಸಹಾಯ ಸಂಘಗಳ ರಚನೆಯಾಗಿರುತ್ತವೆ.

ಸದರಿ ಮಹಿಳಾ ಸ್ವಯಂ ಸಂಘಗಳಿಗೆ ಸಮವಸ್ತ್ರವನ್ನು ವಿತರಿಸಲಾಯಿತು. ಅಧಿಕಾ–ರಿಗಳು ಕ್ಷೇತ್ರಮಟ್ಟದಲ್ಲಿ ಕೆಲಸ ಮಾಡಲು ಅನುಕೂಲವಾಗುವಂತೆ ಮಾನಿಟರಿಂಗ್ ಆ್ಯಪ್ "C-TARA"ಟಾಸ್ಕ ಅಸೈನಮೆಂಟ್ ಮತ್ತು ರಿವ್ಯೂವ್ ಅಪ್ಲಿಕೇಶನ್ ಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಚಾಲನೆ ನೀಡಿದರು.

# ಗಾಂಧೀವಾದ ವಿಶ್ವಕ್ಕೆ ಸಾರ್ವಕಾಲಿಕ ಅವಶ್ಯ: ನಾಡೋಜ ಡಾ. ವೂಡೇ ಪಿ ಕೃಷ್ಣ

ಬೆಳಗಾವಿ: ಜವಾಬ್ದಾರಿ ಮರೆತಯುವ ಜನಾಂಗ, ಭ್ರಷ್ಟಾಚಾರದ ವ್ಯವಸ್ಥೆ ಹೀಗೆ ಅನೇಕ ಸಮಸ್ಯೆಗಳಿಗೆ ಮಹಾತ್ಮ ಗಾಂಧೀಜಿ ಅವರ ಮೌಲ್ಯಯುತ ಸಂದೇಶಗಳು ರಾಮಬಾಣವಾಗಿವೆ. ಹಾಗಾಗೀ ಮಹಾತ್ಮ ಗಾಂಧೀಜಿ ಅವರ ಆದ-ರ್ಶಮಯಜೀವನ ಮತ್ತು ಮೌಲ್ಯಯುತ ಸಂದೇಶಗಳನ್ನೊಳಗೊಂಡ ಗಾಂಧೀವಾದವು ವಿಶ್ವಕ್ಕೆ ಸಾರ್ವಕಾಲಿಕ ಅವಶ್ಯವಾಗಿದೆ ಎಂದು ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಅಧ್ಯಕ್ಷ ನಾಡೋಜ ಡಾ. ವೂಡೇ ಪಿ ಕೃಷ್ಣ ಹೇಳಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಕೆಎಲ್ಇ ವಿಶ್ವವಿದ್ಯಾಲಯ, ಬೆಂಗಳೂರಿನ ಕರ್ನಾಟಕ ಗಾಂಧೀ ಸ್ಮಾರಕ ನಿದಿ ಮತ್ತು ರಾಷ್ಟೊಥಯ ಸೇವಾ ಯೋಜನೆ, ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ನಗರದ ಕುಮಾರ ಗಂಧರ್ವ ರಂಗಮಂದಿರದಲ್ಲಿ ಶುಕ್ರವಾರ ಜರುಗಿದ ಎನ್.ಎಸ್.ಎಸ್ ಅಧಿಕಾರಿಗಳ ಒಂದು ದಿನದ ಪುನಶ್ಚೇತನ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಇತ್ತೀಚೆಗೆ ಅಪರಾಧ ಮತ್ತು ದುಶ್ಚಟಗಳತ್ತ ಬಹು ಪ್ರಮಾಣದಲ್ಲಿ ಯುವಜನತೆ ತುತ್ತಾಗುತ್ತಿದೆ. ಹಾಗಾಗೀ ಯುವಜನರಿಗೆ ಸೂಕ್ತ ದಾರಿ ತೋರುವ ಅವಶ್ಯಕತೆಯಿದೆ. ಮಹಾತ್ಮ ಗಾಂಧೀಜಿ ಅವರ ಮೌಲ್ಯಯುತ ಸಂದೇಶಗಳನ್ನು ಯುವಕರಿಗೆ ತಿಳಿಸುವ ಏಕ ಮಾತ್ರ ಸಂಘಟನೆ ಎನ್ಎಸ್ಎಸ್ ಆಗಿದೆ. ಎನ್.ಎಸ್.ಎಸ್ ಅಧಿಕಾರಿಗಳು ಪರಿಣಾಮಕಾರಿಯಾಗಿ ಎನ್.ಎಸ್.ಎಸ್ ಶಿಬಿರ ಮತ್ತು ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕಾಲೇಜು ವಿದ್ಯಾರ್ಥಿಗಳಿಗೆ ಯುವಜನತೆಗೆ ಅವರ ಜವಾಬ್ದಾರಿ ಮತ್ತು ಶಕ್ತಿಯನ್ನು ಅರಿವು ಮೂಡಿಸಬೇಕು ಎಂದರು.

ಸಮಾಜದಲ್ಲಿ ಜಾತೀಯತೆ, ಮತೀಯತೆ ಎದ್ದು ಕಾಣುತ್ತಿದೆ. ತಾಂತ್ರಿಕ ಜಗದಲ್ಲಿ ಆಡಂಬರದ ಬದುಕಿಗೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ. ಪ್ರಕೃತಿ ಮತ್ತು ಮಾನವನ ಮಧ್ಯದ ಸಂಪರ್ಕ ಕಡಿದು ಹೋಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಯುವಜನಾಂಗ ಕಳೆದು ಹೋಗಿದೆ. ಈ ಎಲ್ಲ ಸಮಸ್ಯೆಗಳಿಗೆ ಪರಿಹಾರದೊರೆಯುವುದು ಗಾಂಧೀವಾದದಿಂದ



ಮಾತ್ರ. ಆದ್ದರಿಂದ ಎನ್.ಎಸ್.ಎಸ್ ಅಧಿಕಾ-ರಿಗಳು ಮತ್ತು ಸ್ವಯಂಸೇವಕರು ಹಳ್ಳಿಯಿಂದ ದಿಲ್ಲಿವರೆಗೆ ಸಮಾಜದ ಸಮಸ್ಯೆಗಳಿಗೆ ಪರಿಹಾರ ನೀಡಲು ಮುಂದಾಗಬೇಕು ಎಂದರು.

ಮಹಾತ್ಮ ಗಾಂಧೀಜಿ ಅವರು ವಿಶ್ವದ ಮಹಾ ಮಾನವತಾವಾದಿ ಎಂದು ಖ್ಯಾತಿ ಪಡೆದಿದ್ದಾರೆ. ಅಮೆರಿಕಾದ ಲೂಥರ್ ಕಿಂಗ್ ಮತ್ತ ಆಫ್ರೀಕಾದ ನೇಲ್ಸ ಮಂಡೇಲಾ ಸೇರಿದಂತೆ ವಿಶ್ವದ ಮಹಾನಾಯಕರು ಮಹಾತ್ಮ ಗಾಂಧೀಜಿ ಅವರ ಜೀವನದಿಂದ ಪ್ರೇರಣೆ ಪಡೆದಿದ್ದಾರೆ. ಗಾಂಧೀಜಿ ಅವರು ತಮ್ಮ ಜೀವನವನ್ನು ಅತ್ಯಂತ ಪರಿಶುದ್ಧ, ಪ್ರಾಮಾಣಿಕ ಮತ್ತು ಪಾರದರ್ಶಕ ಬದುಕನ್ನು ಅವರು ಹೊಂದಿದ್ದರು. ಆದರೆ ಇತ್ತೀಚೆಗೆ ಮಹಾತ್ಮಗಾಂಧೀಜಿ ಅವರ ಜೀವನದ ಕಾರ್ಯಗಳನ್ನು ಮತ್ತು ಸಂದೇಶಗಳನ್ನು ತಿರುಚಲಾಗುತ್ತಿರುವುದು ಎಂದು ಬೇಸರ ವ್ಯಕ್ತಪಡಿಸಿದರು.

ಎನ್.ಎಸ್.ಎಸ್. ರಾಜ್ಯ ಅಧಿಕಾರಿ ಡಾ. ಪ್ರತಾಪ್ ಲಿಂಗಯ್ಯ ಮಾತನಾಡಿ, ದೇಶದಲ್ಲಿ ಸದ್ಯ 45 ಲಕ್ಷ ಮತ್ತು ರಾಜ್ಯದಲ್ಲಿ 6.5 ಲಕ್ಷ ಎನ್.ಎಸ್.ಎಸ್ ಸ್ವಯಂ ಸೇವಕರಿದ್ದಾರೆ. ಈ ಸಂಖ್ಯೆಯನ್ನು ದೇಶದಲ್ಲಿ ಒಂದು ಕೋಟಿ ಮತ್ತು ರಾಜ್ಯದಲ್ಲಿ 10 ಲಕ್ಷ ವೃದ್ಧಿಸುವ ಗುರಿ ಹೊಂದಲಾಗಿದೆ. ಕೇಂದ್ರ ಸರ್ಕಾರ ಎನ್.ಎಸ್.ಎಸ್ ಅನುದಾನವನ್ನು ಹೆಚ್ಚಿಸುವ ಮೂಲಕ ಎನ್.ಎಸ್.ಎಸ್ ಕಾರ್ಯಗಳಿಗೆ ಬಹಳಷ್ಟು ಉತ್ತೇಜನ ನೀಡುತ್ತಿದೆ ಎಂದರು.

ಆರ್ಸಿಯು ಕುಲಸಚಿವೆ ರಾಜಶ್ರೀ ಜೈನಾಪೂರ ಮಾತನಾಡಿ, ಎನ್ಎಸ್ಎಸ್ ಸ್ವಯಂಸೇವಕರಿಗೆ ಗ್ರಾಮೀಣ ಬದುಕಿನ ಅವಿಭಾಜ್ಯ ಅಂಗವಾದ ಕೃಷಿ ಮತ್ತು ಜಾನುವಾರು ಸಾಕಾಣಿಕೆಯ ಚಟುವಟಿಕೆ ಕಾರ್ಯಗಳ ತರಬೇತಿ ನೀಡಬೇಕು. ಇದರಿಂದ ಯುವಜನತೆಗೆ ಗ್ರಾಮ ವಿಕಾಸದ ಮಹತ್ವ ಅರಿಯುತ್ತಾರೆ ಎಂದರು.


ಅಧ್ಯಕ್ಷತೆ ವಹಿಸಿದ್ದ ಆರ್ಸಿಯು ಕುಲಪತಿ ಪ್ರೊ. ಸಿ. ಎಂ. ತ್ಯಾಗರಾಜ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಸಂದೇಶ, ತತ್ವ ಮತ್ತು ಸಿದ್ಧಾಂತಗಳನ್ನು ನಾವೆಲ್ಲರೂ ಪಾಲಿಸುವುದರ ಮೂಲಕ ಮುಂದಿನ ಪೀಳಿಗೆಗೆ ತಿಳಿಸದೆ ಹೋದಲ್ಲಿ ನಾವೆಲ್ಲರೂ ಬಹು ದೊಡ್ಡ ಶಾಪಕ್ಕೆ ಗುರಿಯಾಗುತ್ತೇವೆ.

ಪಾಠ ಮತ್ತು ತರಗತಿಯಿಂದ ವಿಮುಖವಾಗುತ್ತಿರುವ ಕಾಲೇಜು ವಿದ್ಯಾರ್ಥಿಗಳಗೆ ಎನ್.ಎಸ್.ಎಸ್ ಮೂಲಕ ಮೌಲ್ಯಯುತ ಶಿಕ್ಷಣ ನೀಡುವ ಅವಶ್ಯಕತೆಯಿದೆ ಎಂದು ಹೇಳಿದರು.

ಧಾರವಾಡದ ಗಾಂಧೀ ಶಾಂತಿ ಪ್ರತಿಷ್ಠಾನದ ಡಾ. ಸಂಜೀವ ಕುಲಕರ್ಣಿ ಮತ್ತು ಧಾರವಾಡದ ಕವಿವಿಯ ಗಾಂಧೀ ಅಧ್ಯಯನ ಪೀಠದ ನಿವೃತ್ತ ನಿರ್ದೇಶಕಡಾ. ಶಿವಾನಂದ ಶೆಟ್ಟರ ವಿಶೇಷ ಉಪನ್ಯಾಸ ನೀಡಿದರು. ಕಾರ್ಯಾಗಾರದಲ್ಲಿ ಬೆಳಗಾವಿ, ವಿಜಯಪುರ, ಬಾಗಲಕೋಟೆಯ ವಿವಿಧ 150ಕ್ಕೂ ಹೆಚ್ಚು ಕಾಲೇಜುಗಳ ಎನ್ಎಸ್ಎಸ್ ಅಧಿಕಾರಿಗಳು ಮತ್ತು ಸ್ವಯಂ ಸೇವಕರು ಹಾಜರಿದ್ದರು.

ಗಾಂಧೀ ಭವನದ ನಿರ್ದೇಶಕ ಪ್ರೊ. ಜಿ. ಬಿ ಶಿವರಾಜು ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಸಂಜೀವ ತಳವಾರ ನಿರೂಪಿಸಿದರು. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಎನ್.ಎಸ್.ಎಸ್ ಸಂಯೋಜಕ ಡಾ.ಕನಕಪ್ಪ ಪೂಜಾರ ಸ್ವಾಗತಿಸಿದರು. ಕೆಎಲ್ಇ ವಿವಿಯ ಎನ್.ಎಸ್.ಎಸ್ ಸಂಯೋಜಕಿ ಡಾ.ಅಶ್ವಿನಿ ನರಸಣ್ಣವರ ವಂದಿಸಿದರು.

## ಗ್ರಾಮೀಣ ಭಾಗದ ಶಾಲಾ ಮಕ್ಕಳಿಗಾಗಿ ಹೆಚ್ಚುವರಿಯಾಗಿ ಸಾರಿಗೆ ಬಸ್ ವ್ಯವಸ್ಥೆ: ಶಾಸಕ ರಾಜು ಕಾಗೆ



ಬೆಳಗಾವಿ: ರಾಜ್ಯದಲ್ಲಿರುವ ಗ್ರಾಮೀಣ ಭಾಗದ ಶಾಲಾ ಮಕ್ಕಳಿಗಾಗಿ ಹೆಚ್ಚುವರಿಯಾಗಿ ಸಾರಿಗೆ ಬಸ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ವಾಯುವ ಕರ್ನಾಟಕ ಸಾರಿಗೆ ಸಂಸ್ಥೆ ನಿಗಮದ ಅಧ್ಯಕ್ಷ, ಶಾಸಕ ರಾಜು ಕಾಗೆ ಹೇಳಿದರು.

ಶುಕ್ರವಾರ ಬೆಳಗಾವಿ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ನಗರ ಪ್ರದೇಶದಲ್ಲಿರುವ ಶಾಲಾ ಮಕ್ಕಳಿಗಿಂತ ಗ್ರಾಮೀಣ ಭಾಗದಲ್ಲಿರುವ ಶಾಲಾ ಮಕ್ಕಳು ಒಂದು ಕಡೆಯಿಂದ ಇನ್ನೊಂದು ಕಡೆಗೆ ಶಾಲೆಗೆ ಹೋಗಲು ಸಾಕಷ್ಟು ತೊಂದರೆಯಾಗುತ್ತಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಗ್ರಾಮೀಣ ಭಾಗದಲ್ಲಿ ಶಾಲಾ ವಿದ್ಯಾರ್ಥಿಗಳಿಗಾಗಿ ಹೆಚ್ಚುವರಿ ಸಾರಿಗೆ ಬಸ್ ಸೌಕರ್ಯ ಕಲ್ಪಿಸಲು ಸರಕಾರ ಮುಂದಾಗಿದೆ ಎಂದರು.

ಕಾನೂನು ಪ್ರಕಾರ 10 ಲಕ್ಷ ಕಿ.ಮೀ ಸಂಚಾರ ಮಾಡಿದ ಸಾರಿಗೆ ಬಸ್ ಗಳನ್ನು ಸಂಚಾರವನ್ನು ಸ್ಥಗಿತಗೊಳಿಸಬೇಕು. ಆದರೆ ಕಾರಣಾಂತರಗಳಿಂದ 12 ರಿಂದ 14 ಲಕ್ಷ ಬಸ್ ಗಳನ್ನು ಸಂಚಾರ ಮಾಡುತ್ತಿರುವುದು ನಮ್ಮ ಗಮನಕ್ಕೆ ಇದೆ ಎಂದ ಅವರು, ಮುಂದಿನ ದಿನಗಳಲ್ಲಿ ಸಾರಿಗೆ ಬಸ್ಗಳ ಸಂಖ್ಯೆ ಹೆಚ್ಚಿಗೆ ಮಾಡುವಲ್ಲಿ ಹೆಚ್ಚು ಗಮನ ಹರಿಸಲಾಗುವುದು ಎಂದರು.

ಬಸ್ ಟಿಕೆಟ್ ದರ ಹೆಚ್ಚಳ ಮಾಡಲು ಚಿಂತನೆ: ಕಳೆದ 10 ವರ್ಷದಿಂದ ಬಸ್ ಟಿಕೆಟ್ ದರ ಹೆಚ್ಚಿಗೆ ಮಾಡಿಲ್ಲ. ಈಗ ಸಾರಿಗೆ ಬಸ್‌ಗಳ ನಿರ್ವಹಣೆ ಮಾಡಲು ಸಾಕಷ್ಟು ಸಮಸ್ಯೆಯಾಗುತ್ತಿದೆ. ಸದ್ಯ ಸಾರಿಗೆ ಬಸ್ ಟಾಯರ್, ಡಿಸೇಲ್ ಸೇರಿದಂತೆ ಬಸ್ಸಿನ ಬಿಡಿ ಭಾಗಗಳ ದರ ಹೆಚ್ಚಿಗೆಯಾಗಿವೆ. ಅದರಂತೆ ನಾವು ಕೂಡಾ ಸಾರಿಗೆ ಹೀತದೃಷ್ಟಿಯಿಂದ ಟಿಕೆಟ್ ದರ ಹೆಚ್ಚಳ ಮಾಡಲು ಚಿಂತನೆ ಮಾಡಲಾಗುತ್ತಿದೆ ಎಂದರು.

ಬೆಂಗಳೂರಿನಲ್ಲಿ ಕಾಂಗ್ರೆಸ್ ಮಾಜಿ ಸಚಿವ ನಾಗೇಂದ್ರ ಅವರನ್ನು ಇಡಿ ಬಂಧನ ಮಾಡಿದೆ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ವಾಲ್ಮೀಕಿ ನಿಗಮದ ಪ್ರಕರಣದಲ್ಲಿ ಮಾಜಿ ಸಚಿವ ನಾಗೇಂದ್ರ ಬಂಧನದ ಬಗ್ಗೆ ನನಗೆ ಮಾಹಿತಿ ಇಲ್ಲ.

ಅದರ ಬಗ್ಗೆ ಹೇಳಲು ನಾನು ಏನು ಬಯಸುವದಿಲ್ಲ. ಇದರ ಬಗ್ಗೆ ಸಂಪೂರ್ಣವಾಗಿ ಸಿಎಂ ಅವರೇ ಉತ್ತರ ನೀಡಲಿದ್ದಾರೆ ಎಂದ ಅವರು, ಇಂತಹ ಪ್ರಕರಣಗಳು ರಾಜಕೀಯದಲ್ಲಿ ನಡೆಯುವುದು ಸರ್ವ ಸಾಮಾನ್ಯ. ಏನೇಲ್ಲಾ ತಂದೂ ಪಾರ್ಟಿ ಮೇಲೆ ಹಾಕುತ್ತಿರುತ್ತಾರೆ.

ಆದ್ದರಿಂದ ಈ ಪ್ರಕರಣ ಕುರಿತು ನಾನು ಏನು ಮಾತನಾಡಲು ಹೋಗೋದಿಲ್ಲ ಎಂದು ಹೇಳಿದರು.

## ವಾಲ್ಮೀಕಿ ಪ್ರಕರಣದಲ್ಲಿ ಮಂತ್ರಿಗಳು-ಶಾಸಕರು ಭಾಗಿಯಾಗಿದ್ದರೆ ಅದು ಖಂಡಿತ ಕಳಂಕ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ವಾಲ್ಮೀಕಿ ನಿಗಮದ ಪ್ರಕರಣ ಸದ್ಯ ತನಿಖಾ ಹಂತದಲ್ಲಿದ್ದು, ಈ ಪ್ರಕರಣದಲ್ಲಿ ಮಂತ್ರಿಗಳು ಹಾಗೂ ಶಾಸಕರು ಭಾಗಿಯಾಗಿದ್ದರೆ ಖಂಡಿತವಾಗಿ ಅದು ಕಳಂಕ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಶುಕ್ರವಾರ ಬೆಳಗಾವಿ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸದ್ಯ ವಾಲ್ಮೀಕಿ ಪ್ರಕರಣ ತನಿಖಾ ಹಂತದಲ್ಲಿದ್ದು, ದಾಖಲೇ ನೋಡಿದ ಮೇಲೆಯೇ ಈ ಪ್ರಕರಣ ಗೊತ್ತಾಗಲಿದೆ. ತಕ್ಷಣ ಈ ಪ್ರಕರಣ ಹೀಗೆ ಇದೆ ಎಂದು ಹೇಳಲು ಕಷ್ಟ ಎಂದು ಹೇಳಿದರು.

ಬಿಜೆಪಿಯವರು ಮುಡಾ ಹಗರಣವನ್ನು ರಾಜಕೀಯವಾಗಿ ಬಳಸಿಕೊಳ್ಳುತ್ತಿದ್ದು, ಸಿಎಂ ರಾಜೀನಾಮೆ ನೀಡಬೇಕೆಂದು ಒತ್ತಾಯಿಸುತ್ತಿದ್ದಾರೆ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತ-ರಿಸಿದ ಅವರು, ಮುಡಾ ಪ್ರಕರಣದಲ್ಲಿ ಸಿಎಂ ಅವರ ಪಾತ್ರ ಏನು ಇಲ್ಲ. ಆಯಾ ಸಚಿವರು ತಮ್ಮ ಇಲಾಖೆಗೆ ಸಂಬಂಧಪಟ್ಟ ಸಮಸ್ಯೆಯನ್ನು ಬಗೆಹ-ರಿಸಿಕೊಳ್ಳಬೇಕು. ಅದನ್ನು, ಬಿಟ್ಟು ತಮ್ಮ ತಮ್ಮ ಇಲಾಖೆ ಸಮಸ್ಯೆಯನ್ನು ಸಿಎಂ ಮೇಲೆ ತರುವುದು ಸೂಕ್ತವಲ್ಲ ಎಂದ ಅವರು, ನಮ್ಮ ಇಲಾಖೆಯನ್ನು ನಾವೇ ನೋಡಿಕೊಳ್ಳಬೇಕು. ಅದು ನಮ್ಮ ಜವಾಬ್ದಾರಿ. ಆದ್ದರಿಂದ ಸಿಎಂಗೂ ಇದಕ್ಕೂ ಯಾವುದೇ ರೀತಿ ಸಂಬಂಧವಿಲ್ಲ ಎಂದರು.

ಮುಡಾಗೆ-ವಾಲ್ಮೀಕಿ ನಿಗಮಕ್ಕೆ ಹೋಲಿಸಲಿಕ್ಕೆ ಆಗೋಲ್ಲ: ಇಂತಹ ಪ್ರಕರಣಗಳು ರಾಜ್ಯದಲ್ಲಿ ಸಾಕಷ್ಟು ನಡೆದಿವೆ. ನಾವು ಕೂಡಾ ಸಾಕಷ್ಟು ನೋಡಿದ್ದೇವೆ. ಆದ್ದರಿಂದ ಮುಡಾಗೆ ವಾಲ್ಮೀಕಿ ನಿಗಮಕ್ಕೆ ಹೋಲಿಸಲು ಆಗೋದಿಲ್ಲ. ಅದು ಕ್ಲಸ್ಟಲ್ ಕ್ಲೇರ್ ಆಗಿದೆ. ಆದರೆ ಮುಡಾ ಮಾತ್ರ ರಾಜಕೀಯ ಅಂತಾ ಹೇಳಬಹುದು ಎಂದರು.

ಕಾಂಗ್ರೆಸ್ ಆಂತರಿಕ ಜಗಳದಿಂದಲೇ ಈ ಮುಡಾ ಹೊರಗೆ ಬಂದಿದೆ ಎಂದು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಪ್ರಕರಣ ಯಾರೂ ಮಾಡಿದರೂ ಎಂದಾದರೂ ಹೊರಗಡೆ ಬರಲೇಬೇಕು. ಅದರಲ್ಲಿ ಕಾಂಗ್ರೆಸ್, ಬಿಜೆಪಿ ಹಾಗೂ ಆಂತರಿಕ ಜಗಳ ಅಂತಹದೇನಿಲ್ಲ. ಯಾವುದೇ ಪ್ರಕರಣ ಮಾಡಿದ್ದರೂ ಅದು ಹೊರಗಡೆ ಬಂದೇ ಬರುತ್ತದೆ. ಯಾರೇ ತಪ್ಪು ಮಾಡಿದರೇ ಅದು ತಪ್ಪು ತಪ್ಪೇ ಎಂದ ಅವರು, ಒಂದು ಸುಳ್ಳು ಮುಚ್ಚಿಸಲು ಮತ್ತೇ ಸುಳ್ಳು ಹೇಳುವ ಬದಲು ತಪ್ಪು ನಡೆದಾಗ ಯಸ್ ಎಂದರೆ ಅದು ಅಲ್ಲಿಗೆ ಫುಲ್ ಸ್ಟಾಪ್ ಹಾಕುವುದು ಒಳಿತು ಎಂದು ಹೇಳಿದರು.

## ನಾಡಿನ ಮನೆಮಾತಾಗಿದ್ದ ನಟಿ ಅಪರ್ಣಾ ನಿಧನಕ್ಕೆ ಸಂಸದೆ ಪ್ರಿಯಂಕಾ ಜಾರಕಿಹೊಳಿ ಸಂತಾಪ

ಬೆಳಗಾವಿ: ಕನ್ನಡ ಭಾಷೆಯಲ್ಲಿ ಅತ್ಯಂತ ಸೊಗಸಾಗಿ ನಿರೂಪಣೆ ಮಾಡುತ್ತಾ ನಾಡಿನ ಮನೆಮಾತಾಗಿದ್ದ ಬಹುಮುಖ ಪ್ರತಿಭೆಯೊಂದು ಬಹುಬೇಗ ನಮ್ಮನ್ನು ಅಗಲಿರುವ ನಟಿ ಅಪರ್ಣಾ ಅವರ ಸಾವಿನಿಂದ ಮನಸ್ಸಿಗೆ ಅಪಾರ ನೋವುಂಟಾಗಿದೆ ಎಂದು ಸಂಸದೆ ಪ್ರಿಯಂಕಾ ಜಾರಕಿಹೊಳಿ ಅವರು ಸಂತಾಪ ಸೂಚಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಸಂಸದೆ, ಅವರ ನಿಧನವು ಕಲಾ ಲೋಕಕ್ಕೆ ತುಂಬಲಾರದ ನಷ್ಟ. ಮೃತ ಅಪರ್ಣಾರ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಕುಟುಂಬಸ್ಥರಿಗೆ ದುಃಖ ಭರಿಸುವ ಶಕ್ತಿ ಸಿಗಲೆಂದು ಪ್ರಾರ್ಥಿಸುತ್ತೇನೆ ಎಂದಿದ್ದಾರೆ.

## ಅಪರ್ಣಾ ಇಲ್ಲ ಅನ್ನೋದು ಅರಗಿಸಿಕೊಳ್ಳೋಕೆ ಆಗ್ತಿಲ್ಲ: ನಟ ಸೃಜನ್ ಲೋಕೇಶ್ ಭಾವುಕ



ಬೆಂಗಳೂರು: ಕನ್ನಡದ ನಿರೂಪಕಿ ಅಪರ್ಣಾ ನಿಧನದ ಬಗ್ಗೆ ನಟ ಸೃಜನ್ ಲೋಕೇಶ್ ಸಂತಾಪ ಸೂಚಿಸಿದ್ದಾರೆ. ನಟಿಯ ಅಂತಿಮ ದರ್ಶನದ ಬಳಿಕ ಮಾಧ್ಯಮಕ್ಕೆ ಪ್ರತಿಕ್ರಿಯಿಸಿ, ಅಪರ್ಣಾ ಇನ್ನಿಲ್ಲ ಅನ್ನೋ ನೋವು ಯಾವಾಗಲೂ ಕಾಡುತ್ತಲೇ ಇರುತ್ತದೆ ಎಂದು ಸೃಜನ್ ಮಾತನಾಡಿದ್ದಾರೆ.

ಅಪರ್ಣಾ ನಿಧನ ನಿಜಕ್ಕೂ ಬೇಸರ ಆಗಿದೆ. ಪುಟ್ಟಣ್ಣ ಕಣಗಲ್ ನಿರ್ದೇಶನದಲ್ಲಿ ಅಪರ್ಣಾ ನಟಿಸಿದ್ದಾರೆ. ನಾವು ಯಾವಾಗಲೂ ಅವ-ರಿಗೆ ರೇಗಿಸುತ್ತಿದ್ವಿ. ಊರು ಹುಟ್ಟೋಕ್ಕೂ ಮುಂಚೆ ಹುಟ್ಟಿದವರು ನೀವು ಅಂತ. ಅಂದಿನ ಕಾಲದಿಂದಲೂ ಆ್ಯಕ್ಟಿಂಗ್ ಮಾಡ್ತಿದ್ದಾರೆ. ಎಷ್ಟೊಂದು ವರ್ಷಗಳ ಸಾಧನೆ ಅವರದ್ದು. ನಮ್ಮ ಚಿತ್ರರಂಗದಲ್ಲಿ ಲೆಜೆಂಡರಿ ಕಲಾವಿದೆ ಅಪರ್ಣಾ ಎಂದು ಸೃಜನ್ ಲೋಕೇಶ್ ಭಾವುಕರಾಗಿದ್ದಾರೆ.

## ಬೆಳಗಾವಿ: ಗ್ರಾಹಕರಿಂದ ಹಣ ಸಂಗ್ರಹಿಸಿ ಜಿಎಸ್‌ಟಿ ಕಚೇರಿಗೆ ಪಾವತಿಸದೇ ವಂಚನೆ ಮಾಡಿದ ಆರೋಪಿ ಬಂಧನ



ಬೆಳಗಾವಿ: ಬೆಳಗಾವಿಯ ಕೇಂದ್ರಿಯ ಸರಕು ಮತ್ತು ಸೇವಾ ತೆರಿಗೆ ಅಬಕಾರಿ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ ಬರೋಬ್ಬರಿ 132 ಕೋಟಿ ರೂ. ವಂಚನೆ ಪ್ರಕರಣವನ್ನು ಬೇಧಿಸಿದ್ದಾರೆ.

ಫೆಡರಲ್ ಲಾಜಿಸ್ಟಿಕ್ ಮಾಲೀಕ ನಕೀಬ್ ನಜೀಬ್ ಮುಲ್ಲಾ ಬಂಧಿತ ಆರೋಪಿ. ಇನ್ನು ಈ ಬಗ್ಗೆ ಬೆಳಗಾವಿಯಲ್ಲಿ ಮಾತನಾಡಿದ ಜಿಎಸ್‌ಟಿ ಪ್ರಧಾನ ಆಯುಕ್ತ ದಿನೇಶ್ ಪಾಂಗರಕರ, '23.82 ಕೋಟಿ ರೂ. ನಕಲಿ ಇನ್ಪುಟ್ ತೆರಿಗೆ ಕ್ರೆಡಿಟ್ ಒಳಗೊಂಡ 132 ಕೋಟಿ ರೂ. ನಕಲಿ ಜಿಎಸ್‌ಟಿ ಇನ್‌ವಾಯ್ಸ್‌ನ್ನು ಆರೋಪಿ ನಕೀಬ್ ಮುಲ್ಲಾ ಸೃಷ್ಟಿಸಿದ್ದ.

'ಗ್ರಾಹಕರಿಂದ ಹಣ ಸಂಗ್ರಹಿಸಿ ಅದನ್ನು ಜಿಎಸ್‌ಟಿ ಕಚೇರಿಗೆ ಪಾವತಿಸದೇ ನಕಲಿ ಇನ್‌ವಾಯ್ಸ್ ನೀಡುವ ಮೂಲಕ ಇನ್ಪುಟ್ ತೆರಿಗೆ ಪಡೆದಿದ್ದ. ಜೊತೆಗೆ ಆರೋಪಿ ನಕೀಬ್ ಮುಲ್ಲಾ ಹೊಂದಿರುವ ಫೆಡರಲ್ ಲಾಜಿಸ್ಟಿಕ್ ಕಂಪನಿ ಕೂಡ ನಕಲಿ ಎಂಬುದು ತನಿಖೆಯಲ್ಲಿ ಸಾಬೀತಾಗಿದೆ. ಈ ಕಂಪನಿ ಮೂಲಕವೇ ಅನೇಕ ಕಂಪನಿಗಳಿಗೆ ರಿರ್ಟನ್‌ಗಳು. ಇತರೆ ಜಿಎಸ್‌ಟಿ ಸೇವೆ ನೀಡುವುದಾಗಿ ನಕೀಬ್ ಮುಲ್ಲಾ ನಂಬಿಸಿದ್ದ. ಗ್ರಾಹಕರು ನೀಡಿದ ದೂರಿನ ಅನ್ವಯ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಅಧಿಕಾರಿಗಳು ಬಂಧಿಸಿದ್ದಾರೆ. ಇದೀಗ ಆರೋಪಿ ವಿರುದ್ಧ ಸಿಜಿಎಸ್‌ಟಿ ಕಾಯ್ದೆ 2024 ಸೆಕ್ಷನ್ 69ರ ನಿಬಂಧನೆಗಳ ಅಡಿ ಕೇಸ್ ದಾಖಲಾಗಿದ್ದು, ಆರೋಪಿಗೆ 14 ದಿನಗಳ ನ್ಯಾಯಾಂಗ ಬಂಧನಕ್ಕೆ ನೀಡಿ ಬೆಳಗಾವಿ ಎರಡನೇ ಜೆಎಂಎಫ್‌ಸಿ ನ್ಯಾಯಾಲಯ ಆದೇಶ ಹೊರಡಿಸಿದೆ.

## ಆನೇಕಲ್ ನಲ್ಲಿ ದುರಂತ: ವಿದ್ಯುತ್ ಶಾಕ್ ಗೆ 40 ಬೈಕ್‌ಗಳು ಸುಟ್ಟು ಭಸ್ಮ



ಆನೇಕಲ್: ಕಂಟೇನರ್ ವಾಹನಕ್ಕೆ ವಿದ್ಯುತ್ ತಂತಿ ಪರಿಣಾಮ 40 ಬೈಕ್ ಗಳು ಸುಟ್ಟು ಭಸ್ಮವಾಗಿರುವ ಘಟನೆ ರಾಷ್ಟ್ರೀಯ ಹೆದ್ದಾರಿಯ ರಾಯಕೋಟೆ ಸಮೀಪದ ನಡೆದಿದೆ.

ಟಿವಿಎಸ್ ಕಂಪನಿಯ ಸುಮಾರು 40 ದ್ವಿಚಕ್ರ ವಾಹನಗಳನ್ನು ಕಂಟೇನರ್ ಮೂಲಕ ಉತ್ತನಹಳ್ಳಿಯ ಗೋಡೌನ್‌ನಿಂದ ಕೊತ್ತಕೊಂಡಹಳ್ಳಿಗೆ ಕೊಂಡೊಯ್ಯುತ್ತಿದ್ದಾಗ ಈ ಅವಘಡ ನಡೆದಿದೆ.

ರಸ್ತೆಯಲ್ಲಿ ಸಾಗುತ್ತಿದ್ದ ಕಂಟೇನರ್ ವಾಹನಕ್ಕೆ ವಿದ್ಯುತ್ ತಂತಿ ತಗುಲಿದೆ. ಈ ವೇಳೆ ಕಂಟೇನರ್ ವಾಹನದಲ್ಲಿ ಬೆಂಕಿ ಕಾಣಿಸಿಕೊಂಡಿದೆ.

ನೋಡನೋಡುತ್ತಿದ್ದಂತೆ 30 ಲಕ್ಷ ಬೆಲೆಬಾಳುವ 40 ದ್ವಿಚಕ್ರ ವಾಹನಗಳು ಬೆಂಕಿಗಾಹುತಿ ಆಗಿವೆ. ಅದೃಶ್ಯವಶಾತ್ ಬೆಂಕಿ ಕಾಣಿಸಿಕೊಳ್ಳುತ್ತಿದ್ದ ಚಾಲಕ ಹಾಗೂ ಕ್ಲೀನರ್ ಜಿಗಿದು ಪ್ರಾಣವನ್ನು ಉಳಿಸಿಕೊಂಡಿದ್ದಾರೆ.

## ನೂತನ ಕಟ್ಟಡ ಉದ್ಘಾಟನೆ




ಬೆಳಗಾವಿ: ರಾಮದುರ್ಗದಲ್ಲಿ ಮರಾಠಾ ಅರ್ಬನಕೋ-ಆಪರೇಟಿವ ಕ್ರೇಡಿಟ್ ಸೋಸೈಟಿಯ ನೂತನ ಕಟ್ಟಡವನ್ನು ಬಿಜೆಪಿ ರಾಜ್ಯಉಪಾಧ್ಯಕ್ಷರಾದ ಮಜಿ ಶಾಸಕ ಅನಿಲ ಬೆನಕೆ ಅವರ ಉಪಸ್ಥಿತಿಯಲ್ಲಿ ಉದ್ಘಾಟಿಸಲಾಯಿತು.

ಬೆಳಗಾವಿ ಜಿಲ್ಲೆಯ ರಾಮದುರ್ಗದ ಭವಾನಿ ನಗರದಲ್ಲಿ ಜರುಗಿದ ಕರ್ನಾಟಕಕ್ಷತ್ರಿಯ ಮರಾಠ ಸಮಾಜದ ಜಗದ್ಗುರುಗಳಾದ ಶ್ರೀ ಮಂಜುನಾಥ ಭಾರತಿ ಸ್ವಾಮೀಜಿಯವರ ಭವ್ಯ ಮೆರವಣಿಗೆ, ಸರ್ವಧರ್ಮ ಸಾಮೂಹಿಕ ವಿವಾಹ ಹಾಗೂ ಮರಾಠ ಅರ್ಬನಕೋ-ಆಪರೇಟಿವ ಕ್ರೇಡಿಟ್ ಸೋಸೈಟಿಯ ನೂತನ ಕಟ್ಟಡ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಕಾರ್ಯಕ್ರಮವನ್ನು ಉದ್ದೇಶಿಸಿ ಅನಿಲ ಬೆನಕೆ ಮಾತನಾಡಿ, ಸಮಾಜದ ಸರ್ವಾಂಗಿಣ ಅಭಿವೃದ್ಧಿಗೆ ಮರಾಠಾ ಸಮಾಜವು ಪ್ರಾಚಿನ ಕಾಲದಿಂದಲು ತಮ್ಮ ಅತ್ಯಮುಲ್ಯ ಸೇವೆ ಸಲ್ಲಿಸಿದ್ದು, ಇನ್ನು ಮುಂದೆಯೂ ಮರಾಠಾ ಸಮಾಜ ರಾಜ್ಯದ ಹಾಗೂ ದೇಶದ ಸರ್ವಾಂಗಿಣ ಅಭಿವೃದ್ಧಿಗೆ ಸೇವೆ ಸಲ್ಲಿಸಲುತತ್ಪರ ಎಂದರು.

ಭವಾನಿ ಪೀಠದ ಗೋಸಾಯಿ ಮರಾಠ ಮಠದ ಶ್ರೀ ಶ್ರೀಶ್ರೀ ಮಂಜುನಾಥ ಭಾರತಿ ಸ್ವಾಮೀಜಿಯವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಸಂಸದರಾದ ಜಗದೀಶ ಶೇಟ್ಟರ, ಮಾಜಿ ಶಾಸಕರಾದ ಮಹಾದೇವಪ್ಪ ಯಾದವಾಡ, ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಅನಿಲ ಬೆನಕೆ, ಪ್ರಮುಖರಾದ ಟಿ.ಆರ್.ಸುನೀಲ ಚೌಹಾಣ, ಎಸ್.ಆರ್.ಸಿಂದ್ಯಾ, ವೆಂಕಟರಾವ ಚೌಹಾಣ, ಮಲ್ಲಣ್ಣಯಾದವಾಡ ಹಾಗೂ ಗಣ್ಯರು ಉಪಸ್ಥಿತ-ರಿದ್ದರು.

# ಯುವ ಸಮೂಹದ ಬಳಕೆಗೆ ಹೊಸ ಸೊನಾಟಾ

ನವದೆಹಲಿ: ಟೈಟನ್ ಕಂಪನಿ ಲಿಮಿಟೆಡ್ ನಿಂದ ಭಾರತದಲ್ಲಿ ಅತಿ ಹೆಚ್ಚು ಮಾರಾಟವಾಗುವ ಕೈಗಡಿಯಾರ ಬ್ರ್ಯಾಂಡ್ ಆಗಿರುವ ಸೊನಾಟಾ, ಹೊಸ ಗುರುತು ಮತ್ತು ಮರುರೂಪಿಸಿದ ಉತ್ಪನ್ನದೊಂದಿಗೆ ಮಾರುಕಟ್ಟೆಯಲ್ಲಿ ತೀವ್ರ ಸಂಚಲನ ಉಂಟು ಮಾಡಲು ಮುಂದಾಗಿದೆ. ಯುವ ವೃತ್ತಿಪರರ ಅದರಲ್ಲೂ ವಿಶೇಷವಾಗಿ ನಗರ ಮತ್ತು ಉಪನಗರ ಪ್ರದೇಶಗಳಲ್ಲಿ ತಮ್ಮ ವೃತ್ತಿಜೀವನದ ಪ್ರಾರಂಭದಲ್ಲಿ ಇರುವವರ ಸಂಖ್ಯೆ ಗಮನಾರ್ಹವಾಗಿ ಹೆಚ್ಚುತ್ತಿದೆ. ಈ ವೃತ್ತಿಪರರ ಗಮನ ಸೆಳೆಯುತ್ತಿರುವ ವಿನ್ಯಾಸದ ಬಗೆಗಿನ ಆಧುನಿಕ ದೃಷ್ಟಿಕೋನವನ್ನು ಪ್ರಸ್ತುತಪಡಿಸುವ ಗುರಿಯನ್ನು ಸೊನಾಟಾ ಹೊಂದಿದೆ. ನಯವಾದ, ಸಮಕಾಲೀನ ನೋಟದೊಂದಿಗೆ, ಹೊಸ ಸೊನಾಟಾ ಬ್ರ್ಯಾಂಡ್‌ನ ಆಕರ್ಷಣೆ ಮತ್ತು ಉತ್ಸಾಹವನ್ನು ಹೆಚ್ಚಿಸಲು ಪ್ರಯತ್ನಿಸುತ್ತಿದೆ. ಇದು ಇಂದಿನ ಯುವಕರನ್ನು ಪ್ರತಿನಿಧಿಸುವ ಕ್ರಿಯಾಶೀಲ ಹೊಸ ಗುರುತನ್ನು ಸಾಕಾರಗೊಳಿಸಲಿದೆ.

ಉದ್ಯಮದ ಅಂದಾಜಿನ ಪ್ರಕಾರ, ಭಾರತವು 25 ರಿಂದ 34 ವಯೋಮಾನದ ಒಳಗಿನವರ 260 ಮಿಲಿಯನ್ ಯುವ ಗ್ರಾಹಕರನ್ನು ಹೊಂದಿದೆ, ಅವರು ವರ್ಷಕ್ಕೆ 3 ರಿಂದ 4 ಲಕ್ಷ ರೂಪಾಯಿಗಳ ಆದಾಯ ಗಳಿಸುತ್ತಿದ್ದಾರೆ. ಹಳೆಯ ಮತ್ತು ಹೊಸ ತಲೆಮಾರಿನವರು ತಮ್ಮ ವಿಶಿಷ್ಟ ಮಹತ್ವಾಕಾಂಕ್ಷೆಗಳು ಮತ್ತು ಮೌಲ್ಯಗಳೊಂದಿಗೆ ಪ್ರಮುಖ ಆರ್ಥಿಕ ಚಾಲಕ ಶಕ್ತಿಯಾಗಿ ಹೊರಹೊಮ್ಮುತ್ತಿದ್ದಾರೆ. ತಮ್ಮದೇ ಆದ ಯಶಸ್ಸಿನ ಕಥೆಗಳ ಛಾಪು ಮೂಡಿಸುವ ಮತ್ತು ಬ್ರ್ಯಾಂಡ್‌ನ ಉದ್ದೇಶ ಮತ್ತು ಮುನ್ನೋಟ ಅರ್ಥ ಮಾಡಿಕೊಳ್ಳುವ ಮೂಲಕ ಈ ಪೀಳಿಗೆಯು ಸಾಂಪ್ರದಾಯಿಕ ರೂಢಿಗಳನ್ನು ಪ್ರಶ್ನಿಸುವುದರ ಜೊತೆಗೆ ಭವಿಷ್ಯದ ಪರಿಸರವನ್ನೂ ಮರುರೂಪಿಸುತ್ತಿದೆ. ಈ ಒಳನೋಟಗಳನ್ನು ಬಳಸಿಕೊಂಡು,




ಪ್ರವರ್ಧಮಾನಕ್ಕೆ ಬರುತ್ತಿರುವ ಈ ಯುವ ಸಮೂಹದ ನಿರ್ದಿಷ್ಟ ಅಗತ್ಯಗಳು ಮತ್ತು ಆದ್ಯತೆಗಳನ್ನು ಪೂರೈಸಲು ಸೊನಾಟಾ ತಾಜಾ ನೋಟ ಮತ್ತು ಹೊಸ ಗುರುತನ್ನು ರೂಪಿಸಿದೆ.

ಬ್ರ್ಯಾಂಡ್‌ನ ಈ ಹೊಸ ಪಯಣದ ಕು-ರಿತು ಮಾತನಾಡಿದ ಸೊನಾಟಾ ಬ್ರ್ಯಾಂಡ್‌ನ ಮುಖ್ಯಸ್ಥ ಪ್ರತೀಕ್ ಗುಪ್ತಾ ಅವರು, "ಇಂದಿನ ಯುವ ಕನಸುಗಾರರ ಚೈತನ್ಯವನ್ನು ನಿಜವಾಗಿಯೂ ಸಾಕಾರಗೊಳಿಸಲು ಹೊಸದಾಗಿ ಮರುರೂಪಿಸಲಾದ ಸೊನಾಟಾ ಪರಿಚಯಿಸಲು ನಾವು ಪುಳಕಿತರಾಗಿದ್ದೇವೆ. ಯುವ ಸಮೂಹಕ್ಕೆ ಅವರ ಆಕರ್ಷಕ ಶೈಲಿ ಹೆಚ್ಚಿಸುವುದರ ಜೊತೆಗೆ ಅವರ ಪ್ರಯಾಣ ಮತ್ತು ಸಾಧನೆಗಳ ಸಂಕೇತವಾಗಿಯೂ ಕಾರ್ಯನಿರ್ವಹಿಸುವ ಕೈಗಡಿಯಾರಗಳನ್ನು ಒದಗಿಸುವುದು ನಮ್ಮ ಗುರಿಯಾಗಿದೆ. ಗುಣಮಟ್ಟ ಹಾಗೂ ಆಕರ್ಷಣೆಗೆ ಯುವ ಸಮೂಹ ಕೊಡುವ ಮೌಲ್ಯವನ್ನು ನಾವು ಗುರುತಿಸಿದ್ದೇವೆ. ನಮ್ಮ ಈ ಹೊಸ ವಿನ್ಯಾಸಗಳು ಈ ಬೆಳವಣಿಗೆಯನ್ನು ಸಮರ್ಪಕವಾಗಿ ಪ್ರತಿಬಿಂಬಿಸಲಿದ್ದು, ಅತ್ಯಾಧುನಿಕ ಶೈಲಿ ಒದಗಿಸುವಾಗ ಲಭ್ಯತೆ ಜೊತೆ ರಾಜಿ ಮಾಡಿಕೊಂಡಿರುವುದಿಲ್ಲ. ಈ ಉತ್ಸಾಹಿ ಯುವ ಸಮೂಹದ ಆಕಾಂಕ್ಷೆಗಳು ಮತ್ತು ಜೀವನಶೈಲಿ ಜೊತೆ ಹೊಂದಿಕೊಂಡಿರುವ ಸೊನಾಟಾ, ಅವರ ಬೆಳವಣಿಗೆ ಹಾಗೂ ಪಯಣದಲ್ಲಿನ ಪ್ರತಿಯೊಂದು ಸಾಧನೆ ಮತ್ತು ಮೈಲಿಗಲ್ಲುಗಳ ಜೊತೆ ನಿಲ್ಲಲಿದೆ" ಎಂದು ಹೇಳಿದ್ದಾರೆ.

ಬೆಲೆ ರೂ 1725/- ರಿಂದ ಪ್ರಾರಂಭವಾಗುವ 42 ಆಕರ್ಷಕ ಶೈಲಿಗಳ ಸಂಗ್ರಹದೊಂದಿಗೆ ಹೊಸ ಸೊನಾಟಾ ಆಧುನಿಕ ವಿನ್ಯಾಸಗಳನ್ನು ಒಳಗೊಂಡಿದೆ, ರೋಮಾಂಚಕ ಬಣ್ಣಗಳು ಮತ್ತು ಸಮಕಾಲೀನ ವಿನ್ಯಾಸ ಭಾಷೆಯನ್ನು ಈ ಕೈಗಡಿಯಾರಗಳು ಪ್ರದರ್ಶಿಸುತ್ತವೆ. ಅದರ ವಿವರಗಳು ಮತ್ತು ಅತ್ಯಾಧುನಿಕ ಡಯಲ್‌ಗಳು ಬೋರ್ಡ್‌ರೂಮ್‌ಗಳಿಂದ ಹಿಡಿದು ವಾರಾಂತ್ಯದ ಸಾಹಸಗಳವರೆಗೆ ವಿಭಿನ್ನ ಸೆಟ್ಟಿಂಗ್‌ಗಳಲ್ಲಿ ತಮ್ಮ ಆಕರ್ಷಕ ಶೈಲಿಯನ್ನು ಅಭಿವ್ಯಕ್ತಿಸಲು ಯುವ ಸಮೂಹಕ್ಕೆ ನೆರವಾಗಲಿವೆ. ಸೊನಾಟಾದ ತಾಜಾ ಗುರುತನ್ನು ಜಾಹೀರಾತು ಫಲಕಗಳು ಮತ್ತು ಮಾರುಕಟ್ಟೆಯಾದ್ಯಂತ ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳಲ್ಲಿ ಪ್ರಮುಖವಾಗಿ ಪ್ರದರ್ಶಿಸಲಾಗುತ್ತದೆ.

BELAGAVI VARADDI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089